# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 81 WEDNESDAY 03-06-2026 PRGI No : KNKAN/26/A0962 Pages:4 Rs.2.00 M: 9742418836


# ಸಚಿವರ ಪಟ್ಟಿಗೆ ಹೈ ಮುದ್ರೆ



ಬೆಂಗಳೂರು: ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಇಂದು ಸಂಜೆ ಪ್ರಮಾಣ ವಚನ ಸ್ವೀಕರಿಸಲಿರುವ ಡಿ.ಕೆ.ಶಿವಕುಮಾರ್ ರವರ ಜತೆ 12 ರಿಂದ 14 ಮಂದಿ ಸಚಿವರು ಪ್ರಮಾಣ ವಚನ ಸ್ವೀಕರಿಸಲಿದ್ದು, ಪ್ರಮಾಣ ವಚನ ಸ್ವೀಕರಿಸಲಿರುವ ಸಚಿವರುಗಳ ಪಟ್ಟಿಯನ್ನು ಕಾಂಗ್ರೆಸ್ ಹೈಕಮಾಂಡ್ ಇಂದು ಅಂತಿಮಗೊಳಿಸಲಿದೆ.

ಮೊದಲ ಹಂತದಲ್ಲಿ ಬಹುತೇಕ ಹಿರಿಯ ಶಾಸಕರುಗಳೇ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದು, 2ನೇ ಹಂತದಲ್ಲಿ 8 ರಿಂದ 10 ಮಂದಿ ಹೊಸ ಮುಖಗಳಿಗೆ ಅವಕಾಶ ನೀಡಲು ಹೈಕಮಾಂಡ್ ನಿರ್ಧರಿಸಿದೆ.

ಸಚಿವರ ಪಟ್ಟಿಯನ್ನು ಅಂತಿಮಗೊಳಿಸುವ ಸಂಬಂಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ನೇತೃತ್ವದಲ್ಲಿ ಅವರ ದೆಹಲಿ ನಿವಾಸದಲ್ಲಿಂದು ಸಭೆ ನಡೆದಿದ್ದು, ಈ ಸಭೆಯಲ್ಲಿ ನಿಯೋಜಿತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಸ್ತುವಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ ಇವರುಗಳು ಪಾಲ್ಗೊಂಡು ಸಚಿವರ ಪಟ್ಟಿಯನ್ನು ಅಂತಿಮಗೊಳಿಸುವ ನಿಟ್ಟಿನಲ್ಲಿ ಸುದೀರ್ಘ ಚರ್ಚೆ ನಡೆಸಿದರು.

ಮೊದಲ ಹಂತದಲ್ಲಿ 12 ರಿಂದ 14 ಸಚಿವರು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಸಚಿವರುಗಳ ಪಟ್ಟಿಗೆ ಅಂತಿಮ ರೂಪ ನೀಡಲಾಗಿದ್ದು, ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿಯವರ ಜತೆ ಅಂತಿಮವಾಗಿ ಚರ್ಚಿಸಿ ಸಚಿವರ ಪಟ್ಟಿಯನ್ನು ಫೈನಲ್ ಮಾಡಲಾಗುತ್ತದೆ.

ಸಭೆಯಲ್ಲಿ ಡಿ.ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯನವರು ಮೊದಲ ಹಂತದಲ್ಲಿ ತಮ್ಮ ಕಡೆಯಿಂದ ಯಾರನ್ನು ಸಚಿವರನ್ನಾಗಿಸಬೇಕು ಎಂಬ ಹೆಸರುಗಳನ್ನು ಪ್ರಸ್ತಾಪಿಸಿದ್ದು, ಜತೆಗೆ ಹೈಕಮಾಂಡ್ ಸಹ ಕೆಲವು ಹೆಸರುಗಳನ್ನು ಪ್ರಸ್ತಾಪಿಸಿ ಅಂತಿಮವಾಗಿ 12 ರಿಂದ 14 ಸಚಿವರ ಪಟ್ಟಿಯನ್ನು ತಯಾರಿಸಲಾಗಿದೆ.

ಇದಕ್ಕೆ ರಾಹುಲ್‌ಗಾಂಧಿಯವರ ಅನುಮೋದನೆ ಪಡೆದು ಇಂದು ಸಂಜೆ ಇಲ್ಲವೇ ನಾಳೆ ಬೆಳಿಗ್ಗೆ ಸಚಿವರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.

ಸಿದ್ದರಾಮಯ್ಯ ಸಂಪುಟದಲ್ಲಿದ್ದ ಬಹುತೇಕ ಹಿರಿಯ ಸಚಿವರುಗಳು ಮೊದಲ ಹಂತದಲ್ಲೇ ತಮಗೆ ಸಚಿವ ಸ್ಥಾನ ನೀಡಬೇಕು ಎಂದು ಪಟ್ಟು ಹಿಡಿದಿದ್ದು, ಯಾರನ್ನು ಕೈಬಿಡಬೇಕು, ಯಾರನ್ನು ಸಂಪುಟದಲ್ಲಿ ಉಳಿಸಿಕೊಳ್ಳಬೇಕು ಎಂಬುದು ಹೈಕಮಾಂಡ್‌ಗೆ ತಲೆನೋವಾಗಿದ್ದರೂ ಅಂತಿಮವಾಗಿ 12 ರಿಂದ 14 ಸಚಿವರಿಗಷ್ಟೇ ಅವಕಾಶ ನೀಡುವ ನಿರ್ಧಾರವನ್ನು ಹೈಕಮಾಂಡ್ ಕೈಗೊಂಡಿದೆ ಎಂದು ಹೇಳಲಾಗಿದೆ.

ಹಿರಿಯರಾದ ಕೆ.ಜೆ. ಜಾರ್ಜ್, ರಾಮಲಿಂಗಾರೆಡ್ಡಿ, ಎಂ.ಬಿ. ಪಾಟೀಲ್, ಈಶ್ವರ ಖಂಡ್ರೆ, ಡಾ. ಜಿ. ಪರಮೇಶ್ವರ್, ಸತೀಶ್ ಜಾರಕಿಹೊಳಿ, ಕೆ.ಹೆಚ್. ಮುನಿಯಪ್ಪ, ಎಸ್.ಎಸ್. ಮಲ್ಲಿಕಾರ್ಜುನ್, ಯು.ಟಿ. ಖಾದರ್, ಎಚ್.ಕೆ. ಪಾಟೀಲ್, ಎಚ್.ಸಿ. ಮಹದೇವಪ್ಪ, ಶಿವಾನಂದ ಪಾಟೀಲ್, ಬೈರತಿ ಸುರೇಶ್, ಚೆಲುವರಾಯಸ್ವಾಮಿ ಇವರುಗಳಿಗೆ ಸಚಿವ ಪಟ್ಟ ಸಿಗುವ ಸಾಧ್ಯತೆಗಳಿವೆ.

ಕಾಂಗ್ರೆಸ್‌ನಲ್ಲಿ ಅಂತಿಮ ಕ್ಷಣದವರೆಗೂ ಪಟ್ಟಿ ಬದಲಾವಣೆಯಾಗುವುದು ಸಹಜ. ಹಾಗಾಗಿ ಪ್ರಮಾಣ ವಚನ ಸ್ವೀಕರಿಸುವ ಹೊತ್ತಿಗೆ ಕೆಲವು ಹೆಸರುಗಳು ಕೈಬಿಟ್ಟು ಹೊಸ ಹೆಸರುಗಳು ಸೇರ್ಪಡೆಯಾದರೂ ಅಚ್ಚರಿಯಿಲ್ಲ.

**ದೆಹಲಿಯಲ್ಲಿ ಬೀಡು ಬಿಟ್ಟ ಆಕಾಂಕ್ಷಿಗಳು**

ರಾಜ್ಯ ಸಚಿವ ಸಂಪುಟದಲ್ಲಿ ಶತಾಯ ಗತಾಯ ಸ್ಥಾನ ಪಡೆಯಲು 40ಕ್ಕೂ ಹೆಚ್ಚು ಸಚಿವಾಕಾಂಕ್ಷಿ ಶಾಸಕರುಗಳು ಕಳೆದ 2 ದಿನಗಳಿಂದ ದೆಹಲಿಯಲ್ಲೇ ಮೊಕ್ಕಾಂ ಹೂಡಿದ್ದು, ಹೈಕಮಾಂಡ್ ಮಟ್ಟದಲ್ಲಿ ತಮ್ಮ ಗಾಡ್‌ಫಾದರ್‌ಗಳ ಮೂಲಕ ಸಚಿವ ಸ್ಥಾನ ಪಡೆಯಲು ಪ್ರಯತ್ನ ನಡೆಸಿದ್ದಾರೆ.

**ಜೂನ್ 18ರ ನಂತರ 2ನೇ ಹಂತದ ಸಂಪುಟ**

ಇಂದು ಮೊದಲ ಹಂತದ ಸಂಪುಟ ರಚನೆಯಾದ ಬಳಿಕ ವಿಧಾನ ಪರಿಷತ್ ಹಾಗೂ ರಾಜ್ಯಸಭೆಯ ಚುನಾವಣೆ ಮುಗಿದ ಬಳಿಕ 2ನೇ ಹಂತದ ಸಂಪುಟ ರಚನೆಯಾಗಲಿದ್ದು, ಬಹುತೇಕ ಈ ತಿಂಗಳ ಅಂತ್ಯದೊಳಗೆ ಪೂರ್ಣ ಪ್ರಮಾಣದ ಸಂಪುಟ ರಚನೆಯಾಗಲಿದೆ.

ಸಚಿವ ಸಂಪುಟ ರಚನೆಯ ಮಾತುಕತೆಗಳಲ್ಲಿ ಭಾಗಿಯಾಗಲು ನಿಯೋಜಿತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಸ್ತುವಾರಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿನ್ನೆಯೇ ದೆಹಲಿಗೆ ತೆರಳಿದ್ದು, ನಿನ್ನೆ ಸಂಜೆ ನಡೆಯಬೇಕಿದ್ದ ಸಭೆ ರಾಹುಲ್‌ಗಾಂಧಿಯವರ ಅಲಭ್ಯತೆಯ ಕಾರಣ ನಡೆಯಲಿಲ್ಲ. ಹಾಗಾಗಿ ಇಂದು ಬೆಳಿಗ್ಗೆ ಎಐಸಿಸಿ ಅಧ್ಯಕ್ಷರ ನಿವಾಸದಲ್ಲಿ ಸಭೆ ನಡೆದಿದ್ದು, ಸಂಜೆ ಹೊತ್ತಿಗೆ ಸಚಿವರುಗಳು ಹೆಸರುಗಳ ಸ್ಪಷ್ಟ ಚಿತ್ರಣ ಸಿಗಲಿದೆ.

ದೆಹಲಿಯಲ್ಲಿರುವ ಡಿ.ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯನವರು ಇಂದು ಸಂಜೆ ಬೆಂಗಳೂರಿಗೆ ವಾಪಸ್ಸಾಗಲಿದ್ದು, ಹೈಕಮಾಂಡೇ ಅಂತಿಮವಾಗಿ ಸಚಿವರುಗಳ ಪಟ್ಟಿಯನ್ನು ಪ್ರಕಟಿಸಲಿದೆ.

**ಕೆಪಿಸಿಸಿ ಸಾರಥಿ ಬಗ್ಗೆಯೂ ತೀರ್ಮಾನ**

ಸಚಿವರ ಪಟ್ಟಿ ಜತೆಗೆ ನೂತನ ಕೆಪಿಸಿಸಿ ಅಧ್ಯಕ್ಷರ ಆಯ್ಕೆ ಬಗ್ಗೆಯೂ ವರಿಷ್ಠರ ಸಭೆಯಲ್ಲಿ ಚರ್ಚೆ ನಡೆದಿದ್ದು, ಕೆಪಿಸಿಸಿಗೆ ನೂತನ ಸಾರಥಿ ಯಾರಾಗಲಿದ್ದಾರೆ ಎಂಬುದು ಬಹುತೇಕ ಇಂದೇ ಅಂತಿಮವಾಗಲಿದೆ.

ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಸತೀಶ್ ಜಾರಕಿಹೊಳಿಯವರ ನೇಮಕಕ್ಕೆ ಹೈಕಮಾಂಡ್ ಒಲವು ತೋರಿತ್ತಾದರೂ ಜಾರಕಿಹೊಳಿ ಅವರು ಸಚಿವ ಸ್ಥಾನದ ಬೇಡಿಕೆಯನ್ನಿಟ್ಟಿದ್ದಾರೆ. ಎರಡು ಹುದ್ದೆಗಳನ್ನು ನೀಡಲು ಸಾಧ್ಯವಿಲ್ಲ. ಒಂದನ್ನು ಆಯ್ಕೆ ಮಾಡಿಕೊಳ್ಳಿ ಎಂದು ವರಿಷ್ಠರು ಸತೀಶ್ ಜಾರಕಿಹೊಳಿಯವರಿಗೆ ಹೇಳಿದ್ದಾರಾದರೂ ಎರಡು ಹುದ್ದೆಗಳನ್ನು ಪಡೆಯಲೇಬೇಕೆಂದು ಸತೀಶ್ ಜಾರಕಿಹೊಳಿಯವರು ದೆಹಲಿಯಲ್ಲಿ ಲಾಬಿ ನಡೆಸಿದ್ದು, ನಿನ್ನೆ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ರವರ ಜತೆ ಪ್ರತ್ಯೇಕವಾಗಿ ಚರ್ಚೆ ನಡೆಸಿದರು.

ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಹಿರಿಯ ನಾಯಕ ಹರಿಪ್ರಸಾದ್ ರವರ ಹೆಸರು ಮುನ್ನಲೆಗೆ ಬಂದಿದೆ.

ಒಂದು ವೇಳೆ ಸತೀಶ್ ಜಾರಕಿಹೊಳಿಯವರು ಸಚಿವರಾದರೆ ಹರಿಪ್ರಸಾದ್ ರವರಿಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ಸಿಗುವ ಸಾಧ್ಯತೆಗಳಿವೆ.

ವಿಧಾನಸಭೆಯ ಸ್ಪೀಕರ್ ಯಾರಾಗಬೇಕು ಎಂಬ ಬಗ್ಗೆಯೂ ವರಿಷ್ಠರ ಸಭೆಯಲ್ಲಿ ಚರ್ಚೆಗಳು ನಡೆದಿದ್ದು, ಹಿರಿಯರಾದ ಆರ್.ವಿ. ದೇಶಪಾಂಡೆ, ಹೆಚ್.ಕೆ. ಪಾಟೀಲ್ ಅಥವಾ ದಿನೇಶ್ ಗುಂಡೂರಾವ್ ಸಭಾಧ್ಯಕ್ಷರಾಗುವ ಸಾಧ್ಯತೆಗಳಿವೆ.

## ಛಾಯಾಗ್ರಾಹಕರಿಗೆ ಕೆಪಿಎ ಆಸರೆ ಯೋಜನೆ ಉಪಯುಕ್ತವಾಗಿದೆ



ಗೋಕಾಕ: ಕೆಪಿಎ ಆಸರೆ ಯೋಜನೆಗೆ ಸಂಸದೆ ಪ್ರೀಯಾಂಕಾ ಜಾರಕಿಹೊಳಿ ಚಾಲನೆ ನೀಡಿದರು.

**ಬೆಳಗಾವಿ ವಾರ್ತೆ ಗೋಕಾಕ:** ಅವಿಸ್ಮರಣೀಯ ನೆನಪುಗಳನ್ನು ತಮ್ಮ ಕ್ಯಾಮೆರಾದಲ್ಲಿ ಸೆರೆಹಿಡಿದು ಸದಾ ನೆನಪಿನಲ್ಲಿರುವಂತೆ ಮಾಡುವ ಛಾಯಾಗ್ರಾಹಕರಿಗೆ ಕೆಪಿಎ ಆಸರೆ ಯೋಜನೆ ಉಪಯುಕ್ತವಾಗಿದೆ ಎಂದು ಸಂಸದೆ ಪ್ರೀಯಾಂಕಾ ಜಾರಕಿಹೊಳಿ ಹೇಳಿದರು.

ಅವರು, ಸೋಮವಾರದಂದು ನಗರದ ಹಿಲ್ ಗಾರ್ಡನ ಕಾರ್ಯಾಲಯದಲ್ಲಿ ಕರ್ನಾಟಕ ಫೋಟೊಗ್ರಾಫ಼ರ ಅಸೋಸಿಯೇಷನನವರು ಜಿಲ್ಲಾ ಮತ್ತು ತಾಲೂಕಾ ಸಂಘಗಳ ಸಹಯೋಗದಲ್ಲಿ ನಿಧನ ಹೊಂದಿದ ಛಾಯಾಗ್ರಾಹಕರ ಕುಟುಂಬಕ್ಕೆ ಒಂದು ಲಕ್ಷ ರೂಗಳ ಸಹಾಧನ ನೀಡುವ ಆಸರೆ ಯೋಜನೆಗೆ ಚಾಲನೆ ನೀಡಿ ಮಾತನಾಡುತ್ತಿದ್ದರು.

ಸಂಘವು ಛಾಯಾಗ್ರಾಹಕರ ಮತ್ತು ಅವರ ರಕ್ಷಣೆಗಾಗಿ ನೀಡುತ್ತಿರುವ ಯೋಜನೆಗಳು ಮಾದರಿಯಾಗಿವೆ. ಛಾಯಾಗ್ರಾಹಕರು ಸಂಘಟಿತರಾಗಿ ತಮ್ಮ ವೃತ್ತಿ ಕೌಶಲ್ಯದಿಂದ ಬದುಕನ್ನು ರೂಪಿಸಿಕೊಳ್ಳಿ ಇದಕ್ಕೆ ನಮ್ಮ ಸಹಾಯ ಸಹಕಾರ ಸದಾ ನೀಡುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಕೆಪಿಎನ ಸಂಘಟನಾ ಕಾರ್ಯದರ್ಶಿ ಮಲ್ಲಿಕಾರ್ಜುನ ಕೆ ಆರ್, ಸಂಘದ ಜಿಲ್ಲಾಧ್ಯಕ್ಷ ಲಕ್ಷ್ಮಣ ಯಮಕನಮರಡಿ, ಸಹಕಾರ್ಯದರ್ಶಿ ಸುರೇಶ ರಜಪೂತ, ತಾಲೂಕಾಧ್ಯಕ್ಷ ಗಂಗಾಧರ ಕಳ್ಳಿಗುದ್ದಿ, ಉಪಾಧ್ಯಕ್ಷ ರವಿ ಉಪ್ಪಿನ, ಕಾರ್ಯದರ್ಶಿ ಮಧು ಸೋನಗೋಜಿ, ಖಜಾಂಚಿ ರಾಜಶೇಖರ ರಜಪೂತ ಸೇರಿದಂತೆ ಅನೇಕರು ಇದ್ದರು.

## ಬೆಟಗೇರಿ ಸಿಆರ್‌ಸಿ ವ್ಯಾಪ್ತಿಯಲ್ಲಿ ಅದ್ಧೂರಿಯಾಗಿ ನಡೆದ ಪ್ರಾಥಮಿಕ ಶಾಲಾ ಪ್ರಾರಂಭೋತ್ಸವ



**ಬೆಳಗಾವಿ ವಾರ್ತೆ ಬೆಟಗೇರಿ:** ಮೂಡಲಗಿ ಶೈಕ್ಷಣಿಕ ವಲಯದ ಬೆಟಗೇರಿ ಸಿಆರ್‌ಸಿ ವಲಯ ವ್ಯಾಪ್ತಿಯ ಬೆಟಗೇರಿ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮತ್ತು ಹೆಣ್ಣು ಮಕ್ಕಳ ಕೇಂದ್ರ ಶಾಲೆಯ ಎಲ್ಲ ಸರ್ಕಾರಿ ಹಿರಿಯ ಮತ್ತು ಕಿರಿಯ ಹಾಗೂ ತೋಟದ ಕಿರಿಯ ಪ್ರಾಥಮಿಕ ಕನ್ನಡ ಶಾಲೆಗಳಲ್ಲಿ ಸನ್ 2026-27ನೇ ಸಾಲಿನ ಶೈಕ್ಷಣಿಕ ವರ್ಷಾರಂಭದ ಪ್ರಯುಕ್ತ ಶಾಲಾ ಪ್ರಾರಂಭೋತ್ಸವ, ಪಠ್ಯ ಪುಸ್ತಕ ಮತ್ತು ಸಮವಸ್ತ್ರ ವಿತರಣೆ ಕಾರ್ಯಕ್ರಮ ಜೂ.1 ರಂದು ಸಡಗರದಿಂದ ನಡೆಯಿತು.

ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮತ್ತು ಹೆಣ್ಣು ಮಕ್ಕಳ ಕೇಂದ್ರ ಶಾಲೆಯ ಇಲ್ಲಿಯ ಶಿಕ್ಷಣಪ್ರೇಮಿ ಶಿವಾಜಿ ನೀಲಣ್ಣವರ ಅಕ್ಷರ ಬಂಡಿ ಮೆರವಣಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಶಾಲಾ ಮಕ್ಕಳಿಗೆ ಹೂ ಮತ್ತು ಸಿಹಿ ನೀಡಿ ಶಾಲೆಯ ಶಿಕ್ಷಕರು, ಶಿಕ್ಷಣ ಪ್ರೇಮಿಗಳು ಬರಮಾಡಿಕೊಂಡ ನಂತರ ಸರಸ್ವತಿ ಭಾವಚಿತ್ರಕ್ಕೆ ಮಹಾಪೂಜಾ ಕಾರ್ಯಕ್ರಮ ನಡೆಯಿತು.

ಅಕ್ಷರ ಬಂಡಿ(ಚಕ್ಕಡಿ)ಗೆ ಹೂಡಿದ ಎತ್ತುಗಳನ್ನು ಶೃಂಗರಿಸಿ, ಬಂಡಿಯಲ್ಲಿ ಶಾಲಾ ಮಕ್ಕಳನ್ನು ಕೂಡ್ರಿಸಿ, ಶಾಲಾ ಪ್ರಾರಂಭ, ಮಕ್ಕಳ ದಾಖಲಾತಿ ಸೇರಿದಂತೆ ಹಲವಾರು ಶಿಕ್ಷಣದ ಘೋಷ ವಾಕ್ಯಗಳನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿದ್ಯಾರ್ಥಿಗಳು ಕೂಗುತ್ತಾ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ನಡೆದ ಬಳಿಕ ಶಾಲಾ ಮಕ್ಕಳಿಗೆ ಪಠ್ಯ ಪುಸ್ತಕ, ಸಮವಸ್ತ್ರ ವಿತರಣೆ ಮಾಡಲಾಯಿತು.

**ಬೆಟಗೇರಿ ಸಿಆರ್‌ಸಿ ವಲಯ:** ಮೂಡಲಗಿ ಶೈಕ್ಷಣಿಕ ವಲಯದ ಬೆಟಗೇರಿ ಸಿಆರ್‌ಸಿ ವಲಯ ವ್ಯಾಪ್ತಿಯ ಬೆಟಗೇರಿ, ಬಿಲಕುಂದಿ, ತಪಸಿ, ಕೆಮ್ಮನಕೋಲ, ನಿಂಗಾಪೂರ, ಬಗರನಾಳ ಸೇರಿದಂತೆ ಎಲ್ಲ ಸರ್ಕಾರಿ ಹಿರಿಯ ಮತ್ತು ಕಿರಿಯ ಹಾಗೂ ಎಲ್ಲಾ ಪ್ರಾಥಮಿಕ ತೋಟದ ಕಿರಿಯ ಕನ್ನಡ ಶಾಲೆಗಳಲ್ಲಿ ಜೂ.1ರಂದು ಬೆಳಗ್ಗೆ 10 ಗಂಟೆಗೆ ಶಾಲಾ ಪ್ರಾರಂಭೋತ್ಸವ ಸಡಗರ ಸಂಭ್ರಮದಿಂದ ನಡೆದ ಬಳಿಕ ಶಾಲಾ ಮಕ್ಕಳಿಗೆ ಸಿಹಿ, ಪಠ್ಯ ಪುಸ್ತಕ ಹಾಗೂ ಸಮವಸ್ತ್ರ ವಿತರಣೆ ಮಾಡಲಾಗಿದೆ ಎಂದು ಬೆಟಗೇರಿ ಸಿಆರ್‌ಸಿ ವಲಯ ಸಮೂಹ ಸಂಪನ್ಮೂಲ ವ್ಯಕ್ತಿ ಎಂ.ಬಿ.ನಾಯ್ಕರ ತಿಳಿಸಿದ್ದಾರೆ.

ಬಸವರಾಜ ಪಣದಿ, ಈರಣ್ಣ ಬಳಿಗಾರ, ಶ್ರೀಶೈಲ ಗಾಣಗಿ, ಶಿವರುದ್ರಗೌಡ ದೇಯಣ್ಣವರ, ಶಂಕರ ಕನೋಜಿ, ನಾಗಪ್ಪ ಬಾಣಸಿ, ವಿಶ್ವನಾಥ ಶೀಗಿಹಳ್ಳಿ, ಮಲ್ಲಿಕಾ ರ್ಜುನ ನೀಲಣ್ಣವರ, ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮತ್ತು ಹೆಣ್ಣು ಮಕ್ಕಳ ಶಾಲೆಗಳ ಮುಖ್ಯ ಶಿಕ್ಷಕ ವೈ.ಸಿ.ಶೀಗಿಹಳ್ಳಿ, ಸಿದ್ದಣ್ಣ ಸನದಿ, ಉಭಯ ಶಾಲೆಗಳ ಎಸ್‌ಡಿಎಮ್‌ಸಿ ಅಧ್ಯಕ್ಷ ದುಂಡಪ್ಪ ಕಂಬಿ, ಸಿದ್ಧಾರೂಢ ವಡೇರ, ಎಸ್‌ಡಿಎಮ್‌ಸಿ ಸದಸ್ಯರು, ಶಿಕ್ಷಕರು, ಅತಿಥಿಶಿಕ್ಷಕರು, ಬಿಸಿಯೂಟ ಅಡುಗೆ ಸಿಬ್ಬಂದಿ, ಪಾಲಕರು, ಶಿಕ್ಷಣ ಪ್ರೇಮಿಗಳು ಇದ್ದರು.

## ಕುಲಗೋಡ ಹನುಮಂತ ದೇವರ ದರ್ಶನ ಪಡೆದ ಕೇಂದ್ರ ಸಚಿವ ಪ್ರಹ್ಲಾದ ಜೋಶಿ



ಮೂಡಲಗಿ : ತಾಲೂಕಿನ ಕುಲಗೋಡ ಗ್ರಾಮದ ಶ್ರೀ ಹನುಮಂತ ದೇವರ ದೇವಸ್ಥಾನಕ್ಕೆ ಸೋಮವಾರ ಭೇಟಿ ನೀಡಿ ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ ಅವರನ್ನು ಬಿಜೆಪಿ ಕಾರ್ಯಕರ್ತರು ಸತ್ಕರಿಸಿ ಗೌರವಿಸಿದರು

**ಬೆಳಗಾವಿ ವಾರ್ತೆ ಮೂಡಲಗಿ :** ತಾಲೂಕಿನ ಕುಲಗೋಡ ಗ್ರಾಮದ ಶ್ರೀ ಹನುಮಂತ ದೇವರ ದೇವಸ್ಥಾನಕ್ಕೆ ಕೇಂದ್ರ ಆಹಾರ, ನಾಗರಿಕ ಸರಬರಾಜು & ಗ್ರಾಹಕ ವ್ಯವಹಾರಗಳ ಸಚಿವರಾದ ಪ್ರಹ್ಲಾದ ಜೋಶಿ ಅವರು ಕುಟುಂಬ ಸಮೇತ ಸೋಮವಾರ ಭೇಟಿ ನೀಡಿ ದೇವರ ದರ್ಶನ ಪಡೆದು, ಪೂಜೆ ಸಲ್ಲಿಸಿ ಸರ್ವ ರಿಗೂ ಒಳಿತಾಗಲಿ ಎಂದು ಪ್ರಾರ್ಥಿಸಿದರು.

ಕೇಂದ್ರ ಸಚಿವಾಲಯ ಪೈಕಿ ಶ್ರೀ ಪ್ರಹ್ಲಾದ ಜೋಶಿ ರವರ ಗ್ರಾಹಕರ ವ್ಯಾವಹರಗಳ ಇಲಾಖೆಯು ಗ್ರಾಹಕರ ಕುಂದು ಕೊರತೆ ಪರಿಹಾರ ಮತ್ತು ಪಶ್ಚಿಮ ಏಷ್ಯಾ ಯುದ್ದದಿಂದಾಗಿ ಎದುರಾಗಿರುವ ಬಿಕ್ಕಟ್ಟು ನಿಭಾಯಿಸುವ ವಿಚಾರದಲ್ಲಿ ಅತ್ಯುತಮವಾಗಿ ಕಾರ್ಯ ನಿರ್ವಹಿಸಿದ ಇಲಾಖೆ ಎಂಬ ಗೌರವಕ್ಕೆ ಪಾತ್ರವಾಗಿರುವದರಿಂದ ಈ ಶುಭ ಸಂದರ್ಭದಲ್ಲಿ ಸಚಿವರನ್ನು ಬಿಜೆಪಿ ಕಾರ್ಯಕರ್ತರು ಸತ್ಕರಿಸಿ ಗೌರವಿಸಿದರು.. ಈ ಸಮಯದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ ಪಾಟೀಲ ರಾಜ್ಯಸಭಾ ಸದಸ್ಯರಾದ ಈರಣ್ಣ ಕಡಾಡಿ, ಅರಭಾವಿ ಬಿಜೆಪಿ ಮಂಡಲ ಅದ್ಯಕ್ಷ ಮಹದೇವ ಸೆಕ್ಕಿ ಪುಟ್ಟಣ್ಣ ಪೂಜೇರಿ, ಯಾದವಾಡ ಜಿ.ಪಂ ಗೋವಿಂದ ಕೊಪ್ಪದ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರ ಆಪ್ತ ಸಹಾಯಕ ನಿಂಗಪ್ಪ ಕುರಬೇಟ, ಪಾಂಡು ದಾಸರ ಪ್ರಕಾಶ ಕಾಳಶೆಟ್ಟಿ, ಸಿದ್ದಣ್ಣ ದುರದಿಂಡಿ, ಸ್ಥಳೀಯ ಮುಖಂಡರು, ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಶ್ರೀನಿಧಿ ಸಣ್ಣಕ್ಕಿ ಐಐಟಿ ಮದ್ರಾಸಿಗೆ ಆಯ್ಕೆ

**ಬೆಳಗಾವಿ ವಾರ್ತೆ ಮೂಡಲಗಿ:** ಪಟ್ಟಣದ ಶ್ರೀ ಶ್ರೀಪಾದಬೋಧ ಸ್ವಾಮೀಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅಂತಿಮ ವರ್ಷದ ಬಿ.ಎಸ್ಸಿ ವಿಭಾಗದ ವಿದ್ಯಾರ್ಥಿನಿ ಶ್ರೀನಿಧಿ ಸಣ್ಣಕ್ಕಿ ದೇಶದ ಅತ್ಯಂತ ಪ್ರತಿಷ್ಠಿತ ಪರೀಕ್ಷೆಗಳಲ್ಲಿ ಒಂದಾದ ಸ್ನಾತಕೋತ್ತರ ಜಂಟಿ ಪ್ರವೇಶ ಪರೀಕ್ಷೆ (ಎಂಬ) ಪರೀಕ್ಷೆಯಲ್ಲಿ ಅಖಿಲ ಬಾರತ ಮಟ್ಟದಲ್ಲಿ 408 ನೆಯ ಸ್ಥಾನವನ್ನು ಗಳಿಸಿ ಭೌತಶಾಸ್ತ್ರದ ಸ್ನಾತಕೋತ್ತರ ಪದವಿಗೆ ದೇಶದ ಅಗ್ರಗಣ್ಯ ಸಂಸ್ಥೆಯಾದ ಐಐಟಿ ಮದ್ರಾಸಿಗೆ ಆಯ್ಕೆಯಾಗುವ ಮೂಲಕ ಕಾಲೇಜಿಗೆ ಹಿರಿಮೆಯನ್ನು ತಂದಿರುತ್ತಾರೆ ಎಂದು ಕಾಲೇಜಿನ ಪ್ರಾಚಾರ್ಯ ಮಹೇಶ ಕಂಬಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಧನೆ ಗೈದ ವಿದ್ಯಾರ್ಥಿನಿಯನ್ನು ಕಾಲೇಜಿನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಮತ್ತು ಅರಭಾವಿ ಮತ ಕ್ಷೇತ್ರದ ಶಾಸಕ ಬಾಲಚಂದ್ರ ಜಾರಕಿಹೊಳಿ, ಸರ್ವ ಸದಸ್ಯರು ಹಾಗೂ ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.



# ಹುಬ್ಬಳ್ಳಿ ಫ್ಲೈಓವರ್ ಕಾಮಗಾರಿ: ಜನರ ಸಹನೆ ಮೀರಿ ಆಕ್ರೋಶ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಫ್ಲೈ ಓವರ್ ಕಾಮಗಾರಿ ಯಾವಾಗಲಾದರೂ ಮುಗಿಯಲಿ. ಈ ಬಗ್ಗೆ ಆಡಳಿತ ಯಂತ್ರ ನೀಡುತ್ತಿರುವ ಡೆಡ್‌ಲೈನ್‌ಗಳನ್ನು ನಾವಂತೂ ನಂಬಿಲ್ಲ ಕೊನೇ ಪಕ್ಷ ಕಾಮಗಾರಿ ವ್ಯಾಪ್ತಿಯ ರಸ್ತೆಗಳನ್ನು ಓಡಾಡುವಂತೆ ಆದರೂ ಮಾಡಿ ಇಷ್ಟೂ ಮಾಡಲಾಗುತ್ತಿಲ್ಲವೇ ನಿಮಗೆ ? ನಾವು ಅನುಭವಿಸುತ್ತಿರುವ ಯಮಯಾತನೆಯ ಅನುಭವದ ಅರಿವು ಆಗಬೇಕಿದ್ದರೆ, ಶಾಸಕರು, ಸಚಿವರು, ಕಾರ್ಪೋರೇಟರ್‌ಗಳು ದ್ವಿಚಕ್ರ ವಾಹನವನ್ನು ಏರಿ ಕಾಮಗಾರಿ ವ್ಯಾಪ್ತಿಯಲ್ಲಿ ಒಮ್ಮೆ ಓಡಾಡಿ ಬರಲಿ, ಅದರಲ್ಲೂ ಜನಪ್ರತಿನಿಧಿಗಳೇ ದ್ವಿಚಕ್ರ ವಾಹನವನ್ನು ಚಲಿಸಿಕೊಂಡು ಓಡಾಡಿ ಬಂದರೆ ಇನ್ನೂ ಸ್ಪಷ್ಟವಾಗಿ ಅನುಭವಕ್ಕೆ ಬರುತ್ತದೆ ಇದು ಈಗ ಹುಬ್ಬಳ್ಳಿ ಸಾರ್ವಜನಿಕರ ಆಕ್ರೋಶ !

ಫ್ಲೈ ಓವರ್ ಕಾಮಗಾರಿಯಿಂದಾಗಿ ಸೃಷ್ಟಿಯಾಗಿರುವ ಈ ಹೊಸ ನರಕದ ಬಗ್ಗೆ ಸಾರ್ವಜನಿಕರು ರಾಜ್ಯ ಮತ್ತು ಕೇಂದ್ರ ಸರ್ಕಾರ, ಶಾಸಕರು ಹಾಗೂ ಕಾರ್ಪೋರೇಟರ್‌ಗಳನ್ನು ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಳ್ಳುತ್ತಿದ್ದಾರೆ. ಛೀ ಎಂದು ವ್ಯವಸ್ಥೆಗೆ 'ಮಹಾಮಂಗಳಾರತಿ' ಮಾಡುತ್ತಿದ್ದಾರೆ !!

ಕಾಮಗಾರಿ ಪೂರ್ಣಗೊಂಡ ನಂತರ ಕೆಳ ರಸ್ತೆಗಳನ್ನು ಸರಿ ಮಾಡದೇ ಬಿಡುತ್ತೇವೆ? ಏಕೆ ಹೀಗೆ ಬೆನ್ನು ಬೀಳುತ್ತಿದ್ದೀರಿ ಎಂಬುದು ಆಳುವವರ ಸಹಜ ತರ್ಕವಾಗಿರುತ್ತದೆ. ಆದರೆ ಜನ ಅನುಭವಿಸುತ್ತಿರುವ ನರಕ ಆಡಳಿತ ಯಂತ್ರ ಅಥವಾ ಸರ್ಕಾರದ ತರ್ಕವನ್ನು ಮೀರಿದ್ದಾಗಿದೆ. ಆದ್ದರಿಂದಲೇ ಮೊದಲು ಫ್ಲೈ ಓವರ್ ವ್ಯಾಪ್ತಿಯ ರಸ್ತೆಗಳ ಗುಂಡಿಗಳನ್ನು ಮುಚ್ಚಿ, ಮೋಟರೇಬಲ್ ಮಾಡಿ ಎಂದು ಆಗ್ರಹಿಸುತ್ತಿದ್ದಾರೆ.

**ಗುಂಡಿಗಳ ಅಪಾಯದ ಸುಳಿ** : ಇತ್ತ ಹೊಸೂರು ಸರ್ಕಲ್‌ನಿಂದ (ಕೆನರಾ ಹೋಟೆಲ್ ಮುಂಭಾಗ) ಅತ್ತ ಲ್ಯಾಮಿಂಗ್ಟನ್ ರಸ್ತೆಯ ಮಹಾನಗರ ಪಾಲಿಕೆ ಮಧ್ಯೆ ಎಲ್ಲಿಂದ ಎಲ್ಲಿಯೇ ಹೋದರೂ ಅಕ್ಷರಶಃ ನರಕ. ಇನ್ನು ವಾಹನವನ್ನು ತೆಗೆದುಕೊಂಡು, ಅದರಲ್ಲೂ ದ್ವಿಚಕ್ರ ವಾಹನವನ್ನು ಓಡಿಸಿಕೊಂಡು ಹೋಗುವುದಂತೂ ಸಾಧ್ಯವೇ ಇಲ್ಲ.

ಇತ್ತೀಚೆಗೆ ಸುರಿದ ಮಳೆಯ ನಂತರವಂತೂ ಕಾಮಗಾರಿ ನಡೆಯುತ್ತಿರುವ ಹೊಸೂರು ಸರ್ಕಲ್, ವಿಶೇಷವಾಗಿ ಕಿತ್ತೂರು ಚನ್ನಮ್ಮ ಸರ್ಕಲ್, ಹಳೇ ಕೋರ್ಟ್ ಸರ್ಕಲ್, ಸಂಗೊಳ್ಳಿ ರಾಯಣ್ಣ ಸರ್ಕಲ್ ಹಾಗೂ ಗ್ಲಾಸ್ ಹೌಸ್ ಸರ್ಕಲ್, ಬಸವವನ ಸರ್ಕಲ್‌ಗಳನ್ನು ಸಂಪರ್ಕಿಸುವ ಎಲ್ಲ ರಸ್ತೆಗಳಲ್ಲಿ ಆಳವಾದ ಗುಂಡಿಗಳು ನಿರ್ಮಾಣವಾಗಿವೆ. ಗುಂಡಿಗಳ ಅಪಾಯ ಒಂದೆಡೆಯಾದರೆ ಬಸ್‌ಗಳು, ಕಾರು–ಜೀಪುಗಳು ಹಾಗೂ ಇತರ ದೊಡ್ಡ ವಾಹನಗಳು ನಿಯಂತ್ರಣ ತಪ್ಪಿ ಹಿಂಬದಿಯಿಂದ ಗುದ್ದಿಯಾವು ಎನ್ನುವ ಭಯ ಬೇರೆ !

**ಮೋಟರೇಬಲ್ ಅತ್ಯಗತ್ಯ** : ಯಾವುದೇ ಯೋಜನೆ ನಡೆಯುವಾಗ, ಅದರಲ್ಲೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಮನ್ವಯ ಇಲ್ಲದೇ ಕೆಲಸಗಳು ಆಗುವಾಗ ಕಾಮಗಾರಿ ವಿಳಂಬವಾಗುವುದು ಹಾಗೂ ಜನ ಸಹಿಸಿಕೊಳ್ಳಬೇಕು ಎನ್ನುವುದು ಸಹಜ. ಇದಕ್ಕೆ ಜನರ ತಕರಾರೂ ಇಲ್ಲ. ಆದ್ದರಿಂದಲೇ ಕಳೆದ ಮೂರು ವರ್ಷಗಳಿಂದ ನರಕದಲ್ಲಿ ವಾಸಿಸುತ್ತಲೇ ಹುಬ್ಬಳ್ಳಿ ಫ್ಲೈ ಓವರ್ ಕನಸಿನಲ್ಲಿ ಜನತೆ ನಗುತ್ತಿದ್ದಾರೆ.

ಕುಂಟು ನೆಪಗಳನ್ನು ಬದಿಗಿಟ್ಟು ಕೂಡಲೇ ಆಡಳಿತ ಯಂತ್ರ ಸ್ಪಂದಿಸಬೇಕಾಗಿದೆ. ಕನಿಷ್ಟ ಪಕ್ಷ ಗುಂಡಿಗಳನ್ನು ತುಂಬಿ, ವಾಹನಗಳು ಹೆಚ್ಚು ಅಪಾಯವಿಲ್ಲದಂತೆ ಓಡಾಡುವ ಪರಿಸ್ಥಿತಿಯನ್ನು ಸೃಷ್ಟಿಸಬೇಕಾಗಿದೆ. ರಸ್ತೆಗಳಿಗೆ ಸಂಬಂಧಿಸಿದ ವಿವಿಧ ಕಾನೂನುಗಳೇ ಹೇಳುವಂತೆ ಪಕ್ಕಾ ರಸ್ತೆ ತಡವಾಗುವ ಸಂದರ್ಭದಲ್ಲಿ, ಮೋಟರೇಬಲ್ ಮಾಡಲೇಬೇಕಿದೆ. ಇದು ಜನಪ್ರತಿನಿಧಿಗಳ ಹೊಣೆಗಾರಿಕೆಯೂ ಆಗಿದೆ.

**ಡೆಡ್‌ಲೈನ್ ಸಾಕು ಕ್ರಮ ತೆಗೆದುಕೊಳ್ಳಿ:** ಪಕ್ಕಾ ರಸ್ತೆಗಳನ್ನು ಕಾಮಗಾರಿ ಮುಗಿಯುವ ತನಕ ಮಾಡಲಾಗುವುದಿಲ್ಲ ಎಂಬ ಕಲ್ಪನೆ ನಮಗೂ ಇದೆ. ಕೊನೇ ಪಕ್ಷ ಮೋಟರೇಬಲ್ ಮಾಡಲು ಕೂಡ ಸ್ಥಳೀಯ ಆಡಳಿತಕ್ಕೆ ಆಗುವುದಿಲ್ಲವೇ? ಈಗಾಗಲೇ ಸಾಕಷ್ಟು ಡೆಡ್‌ಲೈನ್‌ಗಳನ್ನು ಗುತ್ತಿಗೆದಾರರಿಗೆ ನೀಡಿರುವ ಶಾಸಕರು ಕೂಡಲೇ ಕ್ರಮ ತೆಗೆದುಕೊಳ್ಳಲಿ ಎಂದು ಹೊಂಬಳ, ಕೆಸಿಸಿಐ ಸದಸ್ಯ ಜಗದೀಶ ಎಸ್. ಆಕ್ರೋಶ ವ್ಯಕ್ತಪಡಿಸಿದ್ದಾರೆ

**ಫ್ಲೈ ಓವರ್ ರಸ್ತೆಗಳಲ್ಲಿ ಓಡಾಡುವುದೇ ಪಾಪ:** ಫ್ಲೈ ಓವರ್ ಕಾಮಗಾರಿ ಮುಗಿಯುವ ಆಶಾಭಾವನೆಯನ್ನೇ ನಾವು ಬಿಟ್ಟಿದ್ದೇವೆ. ಕಿತ್ತೂರು ಚನ್ನಮ್ಮ ಸರ್ಕಲ್ ಕೇಂದ್ರವಾಗಿಟ್ಟುಕೊಂಡು ರಸ್ತೆಗಳಲ್ಲಿ ಓಡಾಡುವುದೇ ಪಾಪ ಎನ್ನುವಂತಾಗಿದೆ. ಏಕಾದರೂ ನಮಗೆ ಈ ಶಿಕ್ಷೆಯನ್ನು ಆಡಳಿತ ಯಂತ್ರ ನೀಡುತ್ತಿದೆ? ಎಂದು ನಗರದ ಹಿರಿಯ ನಾಗರಿಕ ರಾಜಶೇಖರ ಟೊಂಗಳಿ ಹತಾಶೆ ಭಾವನೆ ವ್ಯಕ್ತಪಡಿಸಿದ್ದಾರೆ.

**ಕಾಟಾಚಾರಕ್ಕೆ ಮಾಡುವುದು ಬೇಡ:** ಕಾಮಗಾರಿ ವ್ಯಾಪ್ತಿಯ ರಸ್ತೆಗಳಲ್ಲಿ ಜನತೆ (ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು) ಓಡಾಡುವಷ್ಟು ಕನಿಷ್ಟ ಅನುಕೂಲತೆಗಳನ್ನು ಕಲ್ಪಿಸುವುದು ಇಂದಿನ ಆಧುನಿಕ ಯುಗದಲ್ಲಿ ಖಂಡಿತ ಕಷ್ಟವಲ್ಲ. ಕೂಡಲೇ ಯೋಜನಾ ವ್ಯಾಪ್ತಿಯ ಎಲ್ಲೆಡೆ ರಸ್ತೆಗಳ ಗುಂಡಿಗಳನ್ನು ತಾತ್ಕಾಲಿಕವಾಗಿ ಮುಚ್ಚಬೇಕು. ಈ ಮುಚ್ಚುವಿಕೆ ನುಣುಪಾಗಿ ಇರಬೇಕು. ಕಾಟಾಚಾರಕ್ಕೆ ಜಲ್ಲಿ ಹಾಕಿ ಬಿಡಬಾರದು ಎಂದು ಕಾರ್ಪೋರೇಟ್ ಉದ್ಯೋಗಿ ಅಶ್ವಿನಿ ಅಣ್ವೇಕರ್ ಮನವಿ ಮಾಡಿದ್ದಾರೆ.

# ಮಿಲಿಟರಿ ಬಾಲಕಿಯರ ವಸತಿ ನಿಲಯದ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಗದಗ:** 2026–27 ನೇ ಸಾಲಿನ ಶೈಕ್ಷಣಿಕ ವರ್ಷಕ್ಕಾಗಿ ಧಾರವಾಡ ಶಹರದ ಸಪ್ತಾಪೂರ ರಸ್ತೆಯಲ್ಲಿರುವ ಮಿಲಿಟರಿ ಬಾಲಕಿಯರ ವಸತಿ ನಿಲಯದ ಪ್ರವೇಶಕ್ಕೆ ಸೈನಿಕರ ಹೆಣ್ಣು ಮಕ್ಕಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಧಾರವಾಡ, ಗದಗ, ಹಾವೇರಿ, ಮತ್ತು ಬಳ್ಳಾರಿ ಜಿಲ್ಲೆಗಳ ಗ್ರಾಮಾಂತರ ಪ್ರದೇಶ, ಹಾಗೂ ರಾಜ್ಯದ ಇತರ ಜಿಲ್ಲೆಗಳಲ್ಲಿರುವ ಯುದ್ಧದಲ್ಲಿ ಮಡಿದ ಯೋಧರ ಮತ್ತು ಮಾಜಿ ಸೈನಿಕರ ಹೆಣ್ಣು ಮಕ್ಕಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ. ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ 5 ನೇ ತರಗತಿಯಿಂದ ಪಿಯುಸಿ – 2 ರ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುವುದು. ವಸತಿ ನಿಲಯದಲ್ಲಿ ವಾಸ್ತವ್ಯ ಮತ್ತು ಊಟೋಪಚಾರಗಳು ಉಚಿತವಾಗಿದ್ದು, ಮಾಜಿ ಸೈನಿಕರ ಹೆಣ್ಣು ಮಕ್ಕಳು ಈ ಸೌಲಭ್ಯದ ಉಪಯೋಗ ಪಡೆದುಕೊಳ್ಳಬೇಕು. ವಸತಿ ನಿಲಯದಲ್ಲಿ ಧಾರವಾಡ ನಗರದಲ್ಲಿರುವ ವಿದ್ಯಾ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಮಾತ್ರ ನಿಲಯದಲ್ಲಿ ಪ್ರವೇಶ ನೀಡಲಾಗುವದು. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಉದಯ ಹಾಸ್ಟೇಲ್ ಸರ್ಕಲ್ ಸೈನಿಕ ವಿಶ್ರಾಂತಿ ಗೃಹ ಆವರಣ, ಧಾರವಾಡ ದೂರವಾಣಿ ಸಂಖ್ಯೆ 0836–2440176 ಇವರನ್ನು ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೌಲಭ್ಯ ಕಲ್ಪಿಸಲು ಆಗ್ರಹಿಸಿ ಪ್ರತಿಭಟನೆ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದ ಒಂದನೇ ವಾರ್ಡಿನ ಕವಡೆಶ್ವರ ನಗರದ ನಿವಾಸಿಗಳು ಮೂಲಭೂತ ಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ ಪುರಸಭೆಯ ಮುಂದೆ ಸೋಮುವಾರ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ನಿವಾಸಿಗರು ಅನೇಕ ವರ್ಷಗಳಿಂದ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಂತೆ ಅನೇಕ ಬಾರಿ ಮನವಿ ನೀಡಿ ಪ್ರತಿಭಟನೆ ಕೈಗೊಂಡಿದ್ದರು ಯಾವುದೇ ಪ್ರಯೋಜನವಾಗಿಲ್ಲ ಈಗ ಮಳೆಗಾಲ ಆರಂಭವಾಗಿರುವುದರಿಂದ ರಸ್ತೆಗಳೆಲ್ಲ ಕೆಸರುಗದ್ದೆಗಳಾಗಿದ್ದು ಅಡ್ಡಾಡಲು ಸಹ ಆಗದಂತ ಸ್ಥಿತಿಯಿದೆ ಆದ್ದರಿಂದ ಈ ಕೂಡಲೇ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಹನುಮಂತಪ್ಪ ಬಾಲೆಹೂಸೂರ ನಾಗಪ್ಪ ಪೂಜಾರ ಲಕ್ಷ ??ಣ ಮುಳಗುಂದ ಮಲ್ಲಪ್ಪ ಬನ್ನಿ ಮೈಲಾರಪ್ಪ ಕೋರಿ ಮಂಜಪ್ಪ ಪಡಿಗೇರಿ ಬಸವಣ್ಣ ಉಳ್ಳಟ್ಟಿ ಗಂಗಮ್ಮ ಗಜಗೂಜಿ ಲಕ್ಷವ ಕೋರಿ ದ್ಯಾಮವ್ವಗೂಜಗೊಜಿ ರೇಣವ್ವ ಗೊರವರ ಶಿವಲೀಲಾ ಬನ್ನಿ ಸಂಕವ್ವ ಮುಳಗುಂದ ರೇಣವ್ವ ಪೂಜಾರ ಜಯಮ್ಮ ಕುಷ್ಟಗಿ ರೇಖಾ ಮುಳುಗುಂದ್ ರತ್ನವಾ ಹೊಸಗೌಡ್ರು ಸೇರಿದಂತೆ ಅನೇಕರಿದ್ದರು.

# ಶಾಲಾ ಪ್ರಾರಂಭೋತ್ಸವದ ಸಂಭ್ರಮ

**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲೂಕಿನ ಯಳವತ್ತಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ವಿದ್ಯಾರ್ಥಿಗಳನ್ನು ಹೂಗುಚ್ಛ ನೀಡುವುದರ ಮೂಲಕ ಸ್ವಾಗತಿಸಲಾಯಿತು. ಶಿಕ್ಷಕರು ಪೋಷಕರು ಸಭೆ ಜರುಗಿತು.

ಈ ಕಾರ್ಯಕ್ರಮಕ್ಕೆ ಸಿ ಆರ್ ಪಿ ಗಳಾದ ಕೆಪಿ ಕಂಬಳಿ, ಮಕ್ಕಳ ಜಾಗೃತಿ ಸಂಸ್ಥೆಯ ಸಂಯೋಜಕರಾದ ಆನಂದ ಮಣ್ಣೂರ್ ಹಾಗೂ ಗ್ರಾಮ ಪಂಚಾಯತಿ ನೌಕರರು ಹಾಗೂ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ ಲಕ್ಷ್ಮೇಶ್ವರ ತಾಲೂಕ ಅಧ್ಯಕ್ಷರಾದ ಬಸವರಾಜ ಅರ್ಕಸಾಲಿ ಹಾಜರಿದ್ದರು. ಶಾಲೆಯ ಪ್ರಧಾನ ಗುರುಗಳಾದ ಪಿಎಂ ಕಣಿವಿ, ಪಿಎಂ ಹೂಸಂಗಡಿ, ಎಂಎನ್ ಫಿರಂಗಿ ಹಾಜರಿದ್ದರು. ನಂತರ ಪೋಷಕರು ವಿದ್ಯಾರ್ಥಿಗಳಿಗೆ ಸಮವಸ್ತ್ರ ಪಠ್ಯಪುಸ್ತಕ ವಿತರಿಸಿದರು.



# ಶಿಕ್ಷಣದೊಂದಿಗೆ ಶಿಸ್ತು, ನೈತಿಕ ಮೌಲ್ಯ ಬೆಳೆಸಿಕೊಳ್ಳಲು ಕರೆ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** 2026–27ನೇ ಶೈಕ್ಷಣಿಕ ವರ್ಷದ ಅಂಗವಾಗಿ ಎಸ್.ಎಂ.ಜೆ.ವಿ.ಜಿ. ಮಹಿಳಾ ಪಿಯು ಕಾಲೇಜಿನಲ್ಲಿ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿ ನಿಯರನ್ನು ಗುಲಾಬಿ ಹೂವು ಹಾಗೂ ಸಿಹಿತಿಂಡಿ ನೀಡಿ ಆತ್ಮೀಯವಾಗಿ ಸ್ವಾಗತಿಸಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಸರಸ್ವತಿ ಹುಲ್ಲಣ್ಣವರ ಅವರು ವಿದ್ಯಾರ್ಥಿನಿಯರನ್ನು ಉದ್ದೇಶಿಸಿ ಮಾತನಾಡಿ, ಶಿಕ್ಷಣದೊಂದಿಗೆ ಶಿಸ್ತು, ಸಂಸ್ಕಾರ, ನೈತಿಕ ಮೌಲ್ಯಗಳು ಹಾಗೂ ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳುವಂತೆ ಕರೆ ನೀಡಿದರು. ಪ್ರತಿಯೊಬ್ಬ ವಿದ್ಯಾರ್ಥಿನಿಯೂ ತಮ್ಮ ಗುರಿಯನ್ನು ಸ್ಪಷ್ಟವಾಗಿ ನಿರ್ಧರಿಸಿಕೊಂಡು ಶ್ರಮ ಹಾಗೂ ಸಮರ್ಪಣೆಯಿಂದ ಯಶಸ್ಸಿನ ಶಿಖರವನ್ನು ತಲುಪಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕ ವೃಂದ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದು, ಹೊಸ ಶೈಕ್ಷಣಿಕ ವರ್ಷಕ್ಕೆ ವಿದ್ಯಾರ್ಥಿನಿಯರಿಗೆ ಶುಭ ಹಾರೈಸಿದರು.

# ಶಾಲಾ ಪ್ರಾರಂಭೋತ್ಸವ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ನಗರದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಸನ್ 2026 /27ನೇ ಸಾಲಿನ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಮಕ್ಕಳಿಗೆ ಗುಲಾಬಿ ಹೂ ಪಠ್ಯಪುಸ್ತಕ ಸಮವಸ್ತ್ರ ಸಿಹಿ ಹಂಚುವದ ರೊಂದಿಗೆ ಮಕ್ಕಳನ್ನು ಸ್ವಾಗತಿಸಲಾಯಿತು ಈ ಸಂದರ್ಭ ದಲ್ಲಿ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ನಾಗರಾಜ ಹಣಗಿ ಅವರು ಮಾತನಾಡಿ ಸರ್ಕಾರಿ ಶಾಲೆಗಳಲ್ಲಿ ಅನೇಕ ಯೋಜನೆಗಳು ಜಾರಿಯಲ್ಲಿದ್ದು?ಅವುಗಳ ಸದುಪಯೋಗಪಡಿಸಿಕೊಂಡು ವಿದ್ಯಾರ್ಥಿಗಳು ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಪ್ರಧಾನ ಗುರುಗಳಾದ ಬಸವರಾಜ ಕುಂಬಾರ ಮಾತನಾಡಿ ಈ ವರ್ಷ ಉತ್ತಮ ಕಲಿಕೆ ಉಜ್ವಲ ಭವಿಷ್ಯ ಎಂಬ ಧ್ಯೇಯ ವಾಕ್ಯದೊಂದಿಗೆ ಮಕ್ಕಳು ಶಾಲೆಯಲ್ಲಿ ಗುಣಾತ್ಮಕ ಶಿಕ್ಷಣವನ್ನು ಕಲಿಯುವದರೊಂದಿಗೆ ಉತ್ತಮ ನಾಗರಿಕರನ್ನಾಗಿಸಲು ಹಾಗೂ ಸಮುದಾಯ ಮತ್ತು ಎಸ್.ಡಿ.ಎಂ.ಸಿ.ಎ ಸಹಕಾರದೊಂದಿಗೆ ಹೆಚ್ಚಿನ ದಾಖಲಾತಿ ಮಾಡಲು ಗುರಿ ಹೊಂದಲಾಗಿದೆ ಎಂದರು.

ಈ ಸಂದರ್ಭದಲ್ಲಿ ನೂತನವಾಗಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ಅಧ್ಯಕ್ಷರಾಗಿ ಆಯ್ಕೆಯಾದ ಎಂಎನ್ ಭರಮಗೌಡ್ರ ಹಾಗೂ ನಿರ್ದೇಶಕರಾದ ಮುತ್ತುರಾಜ ಹುಬ್ಬಳ್ಳಿ ಅವರನ್ನು ಸನ್ಮಾನಿಸಲಾಯಿತು ಎಸ್ ಡಿ ಎಂ ಸಿ ಯ ಅಧ್ಯಕ್ಷರಾದ ಮಲ್ಲೇಶಪ್ಪ ಬಸಾಪುರ ಉಪಾಧ್ಯಕ್ಷರಾದ ನಿಖಿತಾ ಸೇಖರ್ಾನೆ ಸಿ ಆರ್ ಪಿ ಯ ಸಂಪನ್ಮೂಲ ವ್ಯಕ್ತಿಗಳಾದ ಶ್ರೀನಿವಾಸ ಮತ್ತೂರ ಉಮೇಶ ನೇಕಾರ ಶಾಲಾ ಸಿಬ್ಬಂದಿ ವರ್ಗ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# "2026–27 ನೇ ಸಾಲಿನ ಮಕ್ಕಳ ಬೇಸಿಗೆ ಶಿಬಿರ"ದ ಸಮಾರೋಪ ಸಮಾರಂಭ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಧಾರವಾಡ:** ರಾಜ್ಯ ಬಾಲಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಪಂಚಾಯತ, ಧಾರವಾಡ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಧಾರವಾಡ ಇವರ ಸಹಯೋಗದಲ್ಲಿ ಜಿಲ್ಲಾ ಮಟ್ಟದಲ್ಲಿ 05 ರಿಂದ 16 ವರ್ಷದೊಳಗಿನ ಮಕ್ಕಳಿಗಾಗಿ 2026–27 ನೇ ಸಾಲಿಗೆ 15 ದಿನಗಳ ಅವಧಿಯ "ಬೇಸಿಗೆ ಶಿಬಿರ" ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಸದರಿ ಶಿಬಿರದ ಸಮಾರೋಪ ಸಮಾರಂಭ' ಕಾರ್ಯಕ್ರಮವನ್ನು ದಿನಾಂಕ:27–05–2026 ರಂದು ರಂಗಾಯಣ ಧಾರವಾಡ ಇಲ್ಲಿ ಹಮ್ಮಿಕೊಂಡಿದ್ದು, ಉದ್ಘಾಟಕರಾಗಿ ಆಗಮಿಸಿದ್ದ ಮಾನ್ಯ ಶ್ರೀ ಪಾಟೀಲ ಭುವನೇಶ ದೇವಿದಾಸ ಭಾ.ಆ.ಸೇ ಮಾನ್ಯ ಅಧ್ಯಕ್ಷರು ಜಿಲ್ಲಾ ಬಾಲಭವನ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಧಾರವಾಡ ಇವರು ಸಸಿಗೆ ನೀರೆರೆಯುವ ಮೂಲಕ ಉದ್ಘಾಟನೆ ನೆರವೇರಿಸಿದರು. ಮುಖ್ಯ ಅತಿಥಿಗಳಾಗಿ ರಂಗಾಯಣ ನಿರ್ದೇಶಕರಾದ ಶ್ರೀ ಝುಕೀರ ನದಾಫ್ ಹಾಗೂ ಶ್ರೀ ವೀರನಗೌಡ ಪಾಟೀಲ ಕಾರ್ಯದರ್ಶಿಗಳು ಜಿಲ್ಲಾ ಬಾಲಭವನ ಹಾಗೂ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ, ಶ್ರೀಮತಿ ಡಾ॥ ಕಮಲಾ ಬೈಲೂರ ಜಿಲ್ಲಾ ನಿರೂಪಣಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ ಹಾಗೂ ಶ್ರೀಮತಿ ವಿಜಯಲಕ್ಷ್ಮೀ ಪಾಟೀಲ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು ಧಾರವಾಡ ಮತ್ತು ಶ್ರೀಮತಿ ದೀಪಾ ಜಾವೂರ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಧಾರವಾಡ ಇವರು ಭಾಗವಹಿಸಿದ್ದರು.



ಸದರಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಮಾನ್ಯ ಶ್ರೀ ಪಾಟೀಲ ಭುವನೇಶ ದೇವಿದಾಸ ಭಾ.ಆ.ಸೇ ಮಾನ್ಯ ಅಧ್ಯಕ್ಷರು ಜಿಲ್ಲಾ ಬಾಲಭವನ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಧಾರವಾಡ ಇವರು ಜಿಲ್ಲಾ ಬಾಲಭವನವು ಮಕ್ಕಳಿಗಾಗಿ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಅವುಗಳಲ್ಲಿ ಬೇಸಿಗೆ ಶಿಬಿರವು ಒಂದಾಗಿದೆ. ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಇಂತಹ ಕಾರ್ಯಕ್ರಮಗಳು ಉತ್ತೇಜನಕಾರಿಯಾಗಿದ್ದು ಮಕ್ಕಳಿಗಾಗಿ ಹಲವಾರು ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿ ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಿ ರಾಜ್ಯಮಟ್ಟದಲ್ಲಿ ಕಲಾಶ್ರೀ ಪ್ರಶಸ್ತಿಗೆ ಭಾಜನರಾಗುವಂತೆ ಮಕ್ಕಳಿಗೆ ತಿಳಿ ಹೇಳಿದರು. ಜಿಲ್ಲಾ ಬಾಲಭವನವು ಮುಂದಿನ ದಿನ ಮಾನಗಳಲ್ಲಿ ಪ್ರತಿ ಶನಿವಾರ ಮತ್ತು ಭಾನುವಾರದಂದು ಮಕ್ಕಳಿಗೆ ವಿಶೇಷ ರೀತಿಯ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ಮಕ್ಕಳಿಗೆ ವೇದಿಕೆಯನ್ನು ಕಲ್ಪಿಸಲಾಗುವುದು ಮತ್ತು ಜಿಲ್ಲಾ ಬಾಲಭವನವನ್ನು ರಾಜ್ಯ ಬಾಲಭವನದ ಮಾದರಿಯಲ್ಲಿ ರೂಪಿಸಲಾಗುವುದು ಎಂದು ತಿಳಿಸಿದರು. ಶಿಬಿರದಲ್ಲಿ ಭಾಗವಹಿಸಿದ ಮಕ್ಕಳು ಹಾಗೂ ಪಾಲಕರ ತಮ್ಮ ತಮ್ಮ ಅನಿಸಿಕೆಗಳನ್ನು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದಂತಹ ಶ್ರೀ ಝುಕೀರ ನದಾಫ್ ನಿರ್ದೇಶಕರು ರಂಗಾಯಣ ಧಾರವಾಡ ಇವರು ಮಾತನಾಡಿ ಮಕ್ಕಳ ಬೆಳವಣಿಗೆಯಲ್ಲಿ ರಂಗಭೂಮಿ ಬಹಳ ಮುಖ್ಯವಾದ ಪಾತ್ರ ವಹಿಸಿದೆ. ಇಂತಹ ಸರ್ಕಾರಿ ಮತ್ತು ಸರ್ಕಾರೇತರ ಸಂಘ ಸಂಸ್ಥೆಗಳು ಮಕ್ಕಳ ಶೀಕ್ಷಣದ ಜೊತೆಗೆ ಕಲಿಕಾ ಪೂರಕ ವಿಷಯಗಳಾದ ಹಾಡು, ನೃತ್ಯ, ನಾಟಕಗಳನ್ನು ವಿವಿಧ ಚಟುವಟಿಕೆಗಳನ್ನು ಅಳವಡಿಸಿಕೊಳ್ಳಬೇಕು. ಇವೆಲ್ಲವನ್ನು ಮಾಡುವುದರಿಂದ ಮಕ್ಕಳಲ್ಲಿರುವಂತಹ ಜಾತಿ ಮತ ಧರ್ಮಗಳ ಅಪನಂಬಿಕೆಗಳು ತೊಲಗಿ ಮಕ್ಕಳ ಸರ್ವತೋಮುಖ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಮಕ್ಕಳಿಗೆ, ಪೋಷಕರಿಗೆ ಹೇಳಿದರು.

ಶ್ರೀ ವೀರನಗೌಡ ಪಾಟೀಲ ಕಾರ್ಯದರ್ಶಿಗಳು ಜಿಲ್ಲಾ ಬಾಲಭವನ ಹಾಗೂ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ ಇವರು ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದು ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಸಾಂಸ್ಕೃತಿಕ ಚಟುವಟಿಕೆ ಹಾಗೂ ಕ್ರಿಯಾತ್ಮಕತೆ ಮಕ್ಕಳಿಗೆ ಪೂರಕವಾಗಿವೆ. ಹಾಗೂ ಜಿಲ್ಲಾ ಬಾಲಭವನದಿಂದ ಇನ್ನೂ ಅನೇಕ ಕಾರ್ಯಕ್ರಮ/ಚವಟುಟಿಕೆಗಳನ್ನು ಆಯೋಜಿಸಲಾಗುತ್ತಿದ್ದು, ಎಲ್ಲ ಮಕ್ಕಳು ಸದರಿ ಕಾರ್ಯಕ್ರಮ/ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವಂತೆ ಮಕ್ಕಳ ಪೋಷಕರಿಗೆ ಹೇಳಿದರು. ನಂತರ ವೇದಿಕೆಯಲ್ಲಿ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ರಾಜ್ಯ ಮಟ್ಟದ ಕಲಾಶ್ರೀ ಪ್ರಶಸ್ತಿಗೆ ಭಾಜನರಾದ ಕು.ಬಿ ಬಿ. ಆಯಿಷಾ ಅತ್ತಾರ ಹಾಗೂ ಕು.ಕೃಷ್ಣಮೂರ್ತಿ ಕಟ್ಟಿಮನಿ ಇವರು ವೇದಿಕೆಯಲ್ಲಿ ತಮ್ಮ ಕಲೆಗಳ ಪ್ರದರ್ಶನ ನೀಡಿದರು.

ಶಿಬಿರದಲ್ಲಿ ಭಾಗವಹಿಸಿದ ಎಲ್ಲ ಮಕ್ಕಳಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಹಾಗೂ 15 ದಿನಗಳಲ್ಲಿ ಮಕ್ಕಳು ತಯಾರಿಸಿದ ವಿವಿಧ ರೀತಿಯ ಕರಕುಶಲ ಕಲೆ, ಚಿತ್ರಕಲೆ, ಕಸದಿಂದ ರಸ, ಜೇಡಿಮಣ್ಣಿನ ಕಲೆಗಳಿಂದ ತಯಾರಿಸಿದ ಆಕೃತಿಗಳನ್ನು ಪ್ರದರ್ಶಿಸಲಾಯಿತು. ಕಾರ್ಯಕ್ರಮದ ಕೊನೆಯಲ್ಲಿ ಮಕ್ಕಳಿಗೆ ಉಪಹಾರವನ್ನು ನೀಡಲಾಯಿತು. ಶ್ರೀಮತಿ ಸುನೀತಾ ನಾಡಗೇರ ಕಾರ್ಯಕ್ರಮ ನಿರೂಪಿಸಿದರೆ, ಶ್ರೀಮತಿ ಡಾ॥ ಕಮಲಾ ಬೈಲೂರ ಜಿಲ್ಲಾ ನಿರೂಪಣಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ ಇವರು ವೇದಿಕೆಯಲ್ಲಿ ಉಪಸ್ಥಿತರಿದ್ದ ಗಣ್ಯ ಮಾನ್ಯರನ್ನು ಸ್ವಾಗತಿಸಿದರು. ಸದರಿ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ಬಸವರಾಜ ಗುಡ್ಡಪ್ಪನವರ, ಮೈತ್ರಾ ಬನ್ನಿಕೊಪ್ಪ, ಲಕ್ಷ್ಮೀ ಹುಬ್ಬಳ್ಳಿ ರಕ್ಷಿತಾ ಕುಂದಗೋಳ, ಶ್ರೀ ಶಶಿಧರ ಮುಂದಿನಮನಿ, ಜಿಲ್ಲಾ ಬಾಲಭವನ ಕಾರ್ಯಕ್ರಮ ಸಂಯೋಜಕರು, ಶ್ರೀಮತಿ ನಿರ್ಮಲಾ ಭುಜಂಗನವರ ಕಛೇರಿ ಸಹಾಯಕರು ಹಾಗೂ ಸಿಬ್ಬಂದಿವರ್ಗದವರು ಹಾಜರಿದ್ದರು. ಕಾರ್ಯಕ್ರಮದ ಕೊನೆಯಲ್ಲಿ ಹಾಜರಿದ್ದ ಎಲ್ಲ ಅತಿಥಿಗಳು, ಮಕ್ಕಳು, ಪಾಲಕರು ಹಾಗೂ ಸಿಬ್ಬಂದಿವರ್ಗದವರಿಗೆ ಶ್ರೀಮತಿ ಯಶೋಧ ಭಜಂತ್ರಿ ವಿಷಯ ನಿರ್ವಾಹಕರು ಜಿಲ್ಲಾ ಬಾಲಭವನ ಧಾರವಾಡ ಇವರು ವಂದನಾರ್ಪಣೆಯನ್ನು ಸಲ್ಲಿಸಿ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಿದರು.

# ಶಾಲಾ ಪ್ರಾರಂಭೋತ್ಸವ ಮತ್ತು ಕಂಪ್ಯೂಟರ್ ಲ್ಯಾಬ್ ಉದ್ಘಾಟನೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಗೋಕುಲ ರಸ್ತೆ, ಮುರಾರ್ಜಿನಗರ 2ನೇ ಹಂತ, ಬಸವ ಕೇಂದ್ರದ ವಿ ಎಂ ಕೊಟಗಿ ಬಸವ ಸಂಸ್ಕೃತಿ ಶಾಲೆಯಲ್ಲಿ ಶೈಕ್ಷಣಿಕ ವರ್ಷ 2026–2027 ಪ್ರಾರಂಭೋತ್ಸವ ಮತ್ತು ಕಂಪ್ಯೂಟರ್ ಲ್ಯಾಬ್ ಉದ್ಘಾಟನೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಬಸವ ಸಂಸ್ಕೃತಿ ಶಾಲೆಯ ಸಮಿತಿಯ ಸದಸ್ಯರು ಹಾಗೂ ಶಿಕ್ಷಕರು ಮಕ್ಕಳನ್ನು ಪುಷ್ಪಾರ್ಪಣೆ ಗೈದು, ಸಿಹಿ ಪದಾರ್ಥ ನೀಡಿ ಹೃದಯ ಸ್ಪರ್ಶಿ ಯಾಗಿ, ಪ್ರೀತಿ, ಮಮತೆ, ಕರುಣೆ, ವಾಸ್ತಲ್ಯ, ಸಂತೋಷ, ಸಡಗರ , ಉತ್ಸಾಹ ದಿಂದ ಸ್ವಾಗತಿಸಲಾಯಿತು. ಬಸವಾಭಿವಾನಿ ಗಳಿಂದ ದಾಸೋಹ ರೂಪದಲ್ಲಿ ಪಡೆದ ಕಂಪ್ಯೂಟರ್ ಗಳನ್ನು ಒಂದಡೆ ಸೇರಿಸಿ ಕಂಪ್ಯೂಟರ್ ಲ್ಯಾಬ್ ನ್ನು ಕರ್ನಾಟಕ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವೇಶ್ವರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಪಣೆ ಮಾಡುವ ಮೂಲಕ ಉದ್ಘಾಟಿಸಲಾಯಿತು.

ಬಸವ ಕೇಂದ್ರದ ವಿ ಎಂ ಕೊಟಗಿ ಬಸವ ಸಂಸ್ಕೃತಿ ಶಾಲೆಯ ಸಮಿತಿಯ ಅಧ್ಯಕ್ಷರು, ದಾಸೋಹಿಗಳಾದ ಎಸ್.ವಿ ಕೊಟಗಿ, ಕಾರ್ಯದರ್ಶಿಗಳು, ನಿವೃತ್ತ ಪ್ರಾಧ್ಯಾಪಕ ಡಾ. ಪ್ರಕಾಶ್ ಮುನ್ನೊಳ್ಳಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಶಾಲೆಯ ಶಿಕ್ಷಕಿಯರಾದ ಶಶಿಕಲಾ ವಾಲಿ, ಮಾಲಾ ರಮೇಶ್, ಮಧು ಕಂಠಿ, ನೇಹಾ ಕಂಠಿ, ರೋಹಿಣಿ, ಶ್ರುತಿ ಇಬ್ರಾಹಿಂಪುರ , ಪ್ರೀತಿ ಪಾಡಾ, ಈಶ್ವರಿ ಬೆಸ್ತ, ಸುಜಾತ ಹಕ್ಕಲ್, ಯಶೋಧ ಗಾಯಕ್‌ವಾಡ್, ಆರತಿ ಜಮ್ಯಾಲ್, ಶಾಲೆಯ ಮಕ್ಕಳು, ಪಾಲಕರು, ಮುಂತಾದವರು ಭಾಗವಹಿಸಿದ್ದರು.

# ಹಿಜಾಬ್ ನಿರ್ಧಾರ ವಿರೋಧಿಸಿ ವಿದ್ಯಾರ್ಥಿಗಳಿಗೆ ಕೇಸರಿ ಶಾಲು ವಿತರಣೆ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಶಾಲಾ–ಕಾಲೇಜುಗಳಲ್ಲಿ ಹಿಜಾಬ್ ನಿಷೇಧ ರದ್ದುಗೊಳಿಸಿದ ರಾಜ್ಯ ಸರ್ಕಾರದ ನಿಲುವು ವಿರೋಧಿಸಿ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯಿಂದ ವಿದ್ಯಾರ್ಥಿಗಳಿಗೆ ಸೋಮವಾರ ಕೇಸರಿ ಶಾಲು ವಿತರಿಸಲಾಯಿತು.

ವಿದ್ಯಾನಗರದಲ್ಲಿರುವ ಕನಕದಾಸ ಪಿಯು ಕಾಲೇಜಿನಲ್ಲಿ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ವಿದ್ಯಾರ್ಥಿಗಳಿಗೆ ಶಾಲು ಹೊದ್ದುಕೊಂಡು ಕಾಲೇಜು ಆವರಣ ಪ್ರವೇಶಿಸುವಂತೆ ಮತ್ತು ಪ್ರತಿ ದಿನವೂ ಶಾಲು ಧರಿಸಿಕೊಂಡೇ ಬರುವಂತೆ ಮನವಿ ಮಾಡಿದರು.




ಹಿಜಾಬ್ ವಿಷಯ ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆ ಹಂತದಲ್ಲಿದೆ. ಆದರೂ, ಸರ್ಕಾರ ಹಿಜಾಬ್ ಧರಿಸಲು ಅನುಮತಿ ನೀಡಿದೆ. ಇದು ವಿದ್ಯಾರ್ಥಿಗಳ ನಡುವೆ ವಿಷ ಬೀಜ ಬಿತ್ತುವ ಹುನ್ನಾರ ನಡೆಸಿದಂತಾಗಿದೆ. ಕಾಂಗ್ರೆಸ್‌ನವರು ಮರಿ ತಾಲಿಬಾನಿಗಳ ರೀತಿ ವರ್ತಿಸುತ್ತಿದೆ. ಎಲ್ಲಾ ಮತ ಸಂಪ್ರದಾಯಗಳಿಗೆ ಆದ್ಯತೆ ಕೊಡಲಿ. ಸರ್ಕಾರದ ನಿರ್ಧಾರದಿಂದ ಯೂನಿಫಾರ್ಮ್ ಉದ್ದೇಶ ಮಣ್ಣು ಪಾಲಾಗುತ್ತದೆ ಎಂದು ದೂರಿದರು. ಸರ್ಕಾರದ ಧೋರಣೆ ಒಂದು ಕಣ್ಣಿಗೆ ಬೆಣ್ಣೆ ಒಂದು ಕಣ್ಣಿಗೆ ಸುಣ್ಣ ನೀತಿ ಎಂಬಂತಾಗಿದೆ ಎಂದು ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಕಿಡಿ ಕಾರಿದರು. ಕೇಸರಿ ಶಾಲು ವಿತರಣೆಯ ಸಂಬಂಧ ಹುಬ್ಬಳ್ಳಿ ಪೊಲೀಸರು ಕಾರ್ಯ ಪ್ರವೃತ್ತರಾಗಿದ್ದು, ಅಹಿತಕರ ಘಟನೆಗಳು ನಡೆಯದಂತೆ ನಗರದ ಎಲ್ಲಾ ಪ್ರಮುಖ ಕಾಲೇಜುಗಳ ಮುಂಭಾಗದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಂಡಿದ್ದರು.

# ಸೌಮ್ಯ ಸ್ವಭಾವ-ಉತ್ತಮ ಆಡಳಿತದ ಮೂಲಕ ಕಿರಿಯರಿಗೆ ಮಾರ್ಗದರ್ಶಕರಾಗಿದ್ದ ಚವ್ಹಾಣ



**ಬೆಳಗಾವಿ ವಾರ್ತೆ ವಿಜಯಪುರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸುಮಾರು 32 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಕೆ. ಕೆ. ಚವ್ಹಾಣ ಅವರಿಗೆ ಇಲ್ಲಿನ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ವಿವಿಧ ಇಲಾಖೆ ಅಧಿಕಾರಿ,ಸಿಬ್ಬಂದಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಆತ್ಮೀಯವಾಗಿ ಸನ್ಮಾನಿಸಿ, ಶುಭ ಹಾರೈಸಿದರು.

ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು, ಸೇವಾ ನಿವೃತ್ತಿ ಹೊಂದುತ್ತಿರುವ ಕೆ. ಕೆ. ಚವ್ಹಾಣ ಅವರು ಸಂಘಟಿತ ಆಡಳಿತ ಮತ್ತು ಎಲ್ಲರನ್ನೂ ಒಳಗೊಳ್ಳುವ ಅದ್ಭುತ ಸ್ವಭಾವವನ್ನು ಹೊಂದಿದ್ದರು. ಎಂತಹ ಕೆಲಸದ ಒತ್ತಡದ ಕ್ಲಿಷ್ಟಕರ ಹಾಗೂ ಕಷ್ಟದ ಪರಿಸ್ಥಿತಿಯಲ್ಲೂ ತಮ್ಮ ಅಧೀನ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿ, ಕಾರ್ಯ ನಿರ್ವಹಣೆಯನ್ನು ಸುಗಮಗೊಳಿಸುತ್ತಿದ್ದರು. ಅತ್ಯಂತ ಸೌಮ್ಯ ಸ್ವಭಾವದೊಂದಿಗೆ ಕಾನೂನು ಪರಿಪಾಲನೆಗೆ ಆದ್ಯತೆ ನೀಡಿ, ಅವರ ಕಾರ್ಯವೈಖರಿ ನಿಜಕ್ಕೂ ಮೆಚ್ಚುವಂತದ್ದು ಎಂದು ಶ್ಲಾಘಿಸಿದರು. ಅಲ್ಲದೆ, ಅವರ ವಿಶ್ರಾಂತ ಜೀವನವು ಅತ್ಯಂತ ಸುಖಮಯ ಹಾಗೂ ಆರೋಗ್ಯಪೂರ್ಣವಾಗಿರಲಿ ಎಂದು ಹಾರೈಸಿದರು.

ಇದೇ ಸಂದರ್ಭದಲ್ಲಿ ಆತ್ಮೀಯ ಸನ್ಮಾನ ಸ್ವೀಕರಿಸಿ ಮಾತನಾಡಿದ ಕೆ. ಕೆ. ಚವ್ಹಾಣ ಅವರು, ನನ್ನ ಸುದೀರ್ಘ ವೃತ್ತಿ ಜೀವನದಲ್ಲಿ ಇಲಾಖೆಯ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಹೆಗಲಿಗೆ ಹೆಗಲು ಕೊಟ್ಟು ಸಹಕರಿಸಿದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರ ಸಹಕಾರ ಅನನ್ಯವಾದದ್ದು.ಈ ಇಲಾಖೆಯಲ್ಲಿ ಸೇವೆ ಸಲ್ಲಿಸಿದ್ದು ನನ್ನ ಬದುಕಿನಲ್ಲಿ ಅತ್ಯಂತ ಖುಷಿ ತಂದಿದೆ ಎಂದು ಭಾವನಾತ್ಮಕವಾಗಿ ತಮ್ಮ ವೃತ್ತಿ ಜೀವನದ ದಿನಗಳನ್ನು ಮೆಲುಕು ಹಾಕಿದರು.

ಜಿಲ್ಲಾ ನಿರೂಪಣಾಧಿಕಾರಿಗಳಾದ ಶ್ರೀಮತಿ ನಿರ್ಮಲಾ ಸುರಪುರ ಅವರು ಕಾರ್ಯಕ್ರಮದ ಸ್ವಾಗತ ಹಾಗೂ ಪ್ರಾಸ್ತಾವಿಕ ನುಡಿಗಳೊಂದಿಗೆ ಕೆ. ಕೆ. ಚವ್ಹಾಣ ಅವರ ಸುದೀರ್ಘ ಸೇವೆಯನ್ನು ಸ್ಮರಿಸಿ, ಕಿರು ಪರಿಚಯ ಮಾಡಿಕೊಟ್ಟರು.

ಈ ಸಮಾರಂಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ, ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳಾದ ರಾಮಣ್ಣ ಅಥಣಿ, ಮುಖ್ಯ ಯೋಜನಾ ನಿರ್ದೇಶಕರಾದ ಸಿ.ಬಿ ಕುಂಬಾರ,ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ. ದೀಪಾ ಕಾಳೆ,ಕ್ರೀಡಾಧಿಕಾರಿ ರಾಜಶೇಖರ ಧೈವಾಡಿ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ,ವಾರ್ತಾಧಿಕಾರಿ ಅಮರೇಶ ದೊಡಮನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ದೀಪಾಕ್ಷಿ ಜಾನಕಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಬಸವರಾಜ ಜಿಗಳೂರ,ಶ್ರೀಮತಿ ಗೀತಾ ಗುತ್ತರಗಿಮಠ,ಎಸ್ ಸಿ ಮ್ಯಾಗೇರಿ, ಶಿವಕುಮಾರ್ ಕುಂಬಾರ, ಸಾಹೇಬ್ ಗೌಡ, ಅನಿಲ್ ಹಳ್ಳಿ ಹಾಗೂ ಶ್ರೀಮತಿ ಶಿಲ್ಪಾ ಹಿರೇಮಠ,ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ, ಸಿಬ್ಬಂದಿ,ವಿವಿಧ ಸರ್ಕಾರೇತರ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವೃದ್ಧಾಶ್ರಮದಲ್ಲಿ ಜನಪದ ಕಳ್ಳ-ಬಳ್ಳಿ ಕಾರ್ಯಕ್ರಮ: ಹಿರಿಯರಲ್ಲಿ ಸಂಭ್ರಮ



**ಬೆಳಗಾವಿ ವಾರ್ತೆ ಕೊಪ್ಪಳ :** ಆಧುನಿಕ ಜಗತ್ತಿನ ಬೆಳವಣಿಗೆಯ ನಡುವೆ ಜನಪದ ಪರಂಪರೆ ಮರೆಯಾಗುತ್ತಿರುವ ಈ ಕಾಲಘಟ್ಟದಲ್ಲಿ ಯುವ ಪೀಳಿಗೆಗೆ ಜನಪದ ಸಂಸ್ಕೃತಿಯನ್ನು ಪರಿಚಯಿಸುವುದು ಅಗತ್ಯವಾಗಿದೆ ಎಂದು ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಅಭಿಪ್ರಾಯಪಟ್ಟರು.

ಕೊಪ್ಪಳ ತಾಲ್ಲೂಕಿನ ಇರಕಲ್ಲಗಡದಲ್ಲಿರುವ ಮೈತ್ರಿ ವೃದ್ಧಾಶ್ರಮದಲ್ಲಿ ಜನಪದ ಕಳ್ಳ-ಬಳ್ಳಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಹಿರಿಯ ನಾಗರಿಕರು ಹಾಗೂ ಗಣ್ಯರು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗವಿಸಿದ್ದಯ್ಯ ಹಳ್ಳಿಕೇರಿಮಠ, ವೃದ್ಧಾಶ್ರಮಗಳಲ್ಲಿ ಆಯೋಜಿಸುವ ಜನಪದ ಕಳ್ಳ-ಬಳ್ಳಿ ಕಾರ್ಯಕ್ರಮಗಳು ಕೇವಲ ಮನರಂಜನೆಗೆ ಸೀಮಿತವಾಗದೇ, ಸಾಂಸ್ಕೃತಿಕ ಜಾಗೃತಿ ಮತ್ತು ಸಾಮಾಜಿಕ ಸೌಹಾರ್ದತೆಯನ್ನು ಬೆಳೆಸುವ ಮಹತ್ವದ ವೇದಿಕೆಯಾಗಿವೆ ಎಂದರು. ಇಂತಹ ಕಾರ್ಯಕ್ರಮಗಳು ಹಿರಿಯ ನಾಗರಿಕರಿಗೆ ಮಾನಸಿಕ ಉಲ್ಲಾಸ ನೀಡುವುದರ ಜೊತೆಗೆ ಜನಪದ ಕಲೆಯ ಸಂರಕ್ಷಣೆಗೆ ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಪ್ರಾಧ್ಯಾಪಕರಾದ ಡಾ. ನಿಂಗಪ್ಪ ಕಂಬಳಿ ಮಾತನಾಡಿ, ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಹಾಗೂ ಯುವ ಸಾಹಿತಿ ಬಿ.ಎನ್. ಹೊರಪೇಟಿ ಅವರ ಜನ್ಮದಿನಾಚರಣೆಯನ್ನು ವೃದ್ಧಾಶ್ರಮದಲ್ಲಿ ಆಚರಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಮಹಿಳಾಪರ ಚಿಂತಕಿ ಪ್ರಿಯದರ್ಶಿನಿ ಮುಂಡರಗಿಮಠ ಮಾತನಾಡಿ, ನೊಂದವರ ಮುಖದಲ್ಲಿ ಮಂದಹಾಸ ಮೂಡಿಸುವ ಕಾರ್ಯಗಳು ಸಮಾಜದಲ್ಲಿ ಹೆಚ್ಚಾಗಬೇಕಿದೆ. ಎಲ್ಲರೂ ತಮ್ಮ ನೋವುಗಳನ್ನು ಮರೆತು ಒಂದೇ ಕುಟುಂಬದ ಸದಸ್ಯರಂತೆ ಬಾಳಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಗವಿಸಿದ್ದಯ್ಯ ಹಳ್ಳಿಕೇರಿಮಠ ಹಾಗೂ ಬಸವರಾಜ ಹೂಗಾರ ಅವರಿಂದ ಜನಪದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಹಿರಿಯ ನಾಗರಿಕರೊಂದಿಗೆ ಸಿಹಿ ಹಂಚುವ ಮೂಲಕ ಜನ್ಮದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುತ್ತಣ್ಣ, ಪರಸಪ್ಪ, ಸಿಬ್ಬಂದಿ ವರ್ಗ ಹಾಗೂ ವೃದ್ಧಾಶ್ರಮದ ಹಿರಿಯ ನಾಗರಿಕರು ಉಪಸ್ಥಿತರಿದ್ದರು. ಬಿ.ಎನ್. ಹೊರಪೇಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಈಶ್ವರ ಖಂಡ್ರೆಗೆ ಡಿಸಿಎಂ ಸ್ಥಾನ ನೀಡಲಿ: ವೀರಶೈವ ಲಿಂಗಾಯತ ಮಹಾಸಭೆ ಒತ್ತಾಯ




**ಬೆಳಗಾವಿ ವಾರ್ತೆ ಬಳ್ಳಾರಿ:** ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಬಿ. ಖಂಡ್ರೆ ಅವರಿಗೆ ನೂತನ ರಾಜ್ಯ ಸರ್ಕಾರದಲ್ಲಿ ಉಪಮುಖ್ಯಮಂತ್ರಿ (ಡಿಸಿಎಂ) ಸ್ಥಾನ ನೀಡಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ (ರಿ) ಬಳ್ಳಾರಿ ಜಿಲ್ಲಾ ಘಟಕ ಒತ್ತಾಯಿಸಿದೆ.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾ ಘಟಕದ ಅಧ್ಯಕ್ಷ ಬಿಚ್ಚಗಲ್ಲು ಪಂಚಾಕ್ಷರಪ್ಪ, ಭಾಲ್ಕಿ ಕ್ಷೇತ್ರದಿಂದ ಸತತ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಈಶ್ವರ ಖಂಡ್ರೆ ಅವರು ಸಚಿವರಾಗಿ ಸಮರ್ಥ ಆಡಳಿತ ನೀಡಿದ್ದು, ರಾಜ್ಯದ ಅಭಿವೃದ್ಧಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಪ್ರಗತಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಸರ್ವ ಸಮುದಾಯಗಳ ವಿಶ್ವಾಸ ಗಳಿಸಿರುವ ಖಂಡ್ರೆ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವುದರಿಂದ ಸರ್ಕಾರಕ್ಕೆ ಮತ್ತಷ್ಟು ಬಲ ದೊರೆಯಲಿದ್ದು, ಅಭಿವೃದ್ಧಿ ಕಾರ್ಯಗಳಿಗೆ ವೇಗ ಸಿಗಲಿದೆ. ಆದ್ದರಿಂದ ಕಾಂಗ್ರೆಸ್ ಹೈಕಮಾಂಡ್ ಹಾಗೂ ರಾಜ್ಯ ಸರ್ಕಾರ ಅವರಿಗೆ ಡಿಸಿಎಂ ಹುದ್ದೆ ನೀಡುವ ಮೂಲಕ ಗೌರವಿಸಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ, ಅಖಂಡ ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ವೀರಶೈವ ಲಿಂಗಾಯತ ಸಮುದಾಯಕ್ಕೆ ಸಮರ್ಪಕ ರಾಜಕೀಯ ಪ್ರಾತಿನಿಧ್ಯ ದೊರೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಜಿಲ್ಲೆಯ ಹಲವು ಮುಖಂಡರು ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ದೀರ್ಘಕಾಲ ದುಡಿಯುತ್ತಿದ್ದು, ಮುಂಬರುವ ವಿಧಾನ ಪರಿಷತ್ ಸದಸ್ಯರ ನೇಮಕಾತಿ ಹಾಗೂ ವಿವಿಧ ನಿಗಮ-ಮಂಡಳಿಗಳಲ್ಲಿ ಜಿಲ್ಲೆಯ ವೀರಶೈವ ಲಿಂಗಾಯತ ಮುಖಂಡರಿಗೆ ಸೂಕ್ತ ಸ್ಥಾನಮಾನ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಪ್ರಮುಖ ಸಮುದಾಯಗಳಲ್ಲಿ ಒಂದಾಗಿರುವ ವೀರಶೈವ ಲಿಂಗಾಯತ ಸಮುದಾಯಕ್ಕೆ ಸಚಿವ ಸಂಪುಟದಲ್ಲೂ ನ್ಯಾಯಯುತ ಪ್ರಾತಿನಿಧ್ಯ ದೊರೆಯಬೇಕು. ಹಿಂದಿನ ಸರ್ಕಾರದಲ್ಲಿ ಎಂಟು ಮಂದಿ ಸಮುದಾಯದ ಸಚಿವರಿದ್ದರೆ, ಈ ಬಾರಿ ಕನಿಷ್ಠ 10 ರಿಂದ 11 ಮಂದಿ ವೀರಶೈವ ಲಿಂಗಾಯತ ಶಾಸಕರಿಗೆ ಸಚಿವ ಸ್ಥಾನ ನೀಡುವ ಮೂಲಕ ಸಮಾಜದ ಆಶಯಗಳನ್ನು ಈಡೇರಿಸಬೇಕು ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಂಗಾವತಿ ವೀರೇಶ್, ವೀರಶೈವ ತರುಣ ಸಂಘದ ಅಧ್ಯಕ್ಷ ನಂದೀಶ್ ಮಠಂ, ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ಕೋರಿ ವಿರುಪಾಕ್ಷಪ್ಪ, ರಾಜ್ಯ ಕಾರ್ಯಕಾರಿಣಿ ಸದಸ್ಯ ಕರೇಗೌಡ ಹಾಗೂ ಅಂಗಡಿ ಶಂಕ್ರಣ್ಣ ಉಪಸ್ಥಿತರಿದ್ದರು.

# ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ

**ಬೆಳಗಾವಿ ವಾರ್ತೆ ಗಂಗಾವತಿ:** ಶರಣಬಸವೇಶ್ವರ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2026–27ನೇ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವವನ್ನು ಜೂನ್ 1ರಂದು ಹಮ್ಮಿಕೊಳ್ಳಲಾಗಿದೆ.

"ಜ್ಞಾನದಿಂದ ಪ್ರಗತಿಯತ್ತ" ಎಂಬ ಧ್ಯೇಯದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಈ ಶಾಲೆಯಲ್ಲಿ "ಉತ್ತಮ ಕಲಿಕೆ = ಉಜ್ವಲ ಭವಿಷ್ಯ" ಎಂಬ ಘೋಷವಾಕ್ಯದ ಅಡಿಯಲ್ಲಿ 1ನೇ ತರಗತಿಯಿಂದ 7ನೇ ತರಗತಿಯವರೆಗೆ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದೆ. ಶೈಕ್ಷಣಿಕ ಸಾಲಿನ ಆರಂಭದ ದಿನವೇ ನೂತನ ವಿದ್ಯಾರ್ಥಿಗಳಿಗೆ ಪುಸ್ತಕ, ಸಮವಸ್ತ್ರ ವಿತರಣೆ ಹಾಗೂ ಸ್ವಾಗತ ಕಾರ್ಯಕ್ರಮ ನಡೆಯಲಿದೆ ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.

ವಿಶೇಷತೆಗಳು:

ಶಾಲೆಯಲ್ಲಿ ಕನ್ನಡ ಮತ್ತು ಇಂಗ್ಲಿಷ್ ದ್ವಿಭಾಷಾ ಮಾಧ್ಯಮದಲ್ಲಿ ಬೋಧನೆ ನೀಡಲಾಗುತ್ತದೆ. ಅನುಭವಿ ಶಿಕ್ಷಕರ ತಂಡದಿಂದ ಗುಣಮಟ್ಟದ ಬೋಧನೆ, ಶಿಸ್ತು ಮತ್ತು ಸುರಕ್ಷತೆಯಿಂದ ಕೂಡಿದ ಉತ್ತಮ ಶೈಕ್ಷಣಿಕ ವಾತಾವರಣ, ಗ್ರಂಥಾಲಯ, ಕಂಪ್ಯೂಟರ್ ಸೌಲಭ್ಯ ಹಾಗೂ ಹಸಿರು ಆವರಣದ ನೈಸರ್ಗಿಕ ಕಲಿಕಾ ಪರಿಸರ ವಿದ್ಯಾರ್ಥಿಗಳಿಗೆ ಲಭ್ಯವಿದೆ. ಇದರೊಂದಿಗೆ ಆಟೋಟ ಮತ್ತು ಕ್ರೀಡೆಗಳಿಗೂ ವಿಶೇಷ ಪ್ರೋತ್ಸಾಹ ನೀಡಲಾಗುತ್ತಿದೆ. ಈ ವರ್ಷದಿಂದ ವಿಜ್ಞಾನ ಪ್ರಯೋಗಾಲಯ ಮತ್ತು ಡಿಜಿಟಲ್ ಕಲಿಕಾ ಕೊಠಡಿಯನ್ನು ಮತ್ತಷ್ಟು ಬಲಪಡಿಸುವ ಯೋಜನೆಯೂ ಇದೆ.

ಉಚಿತ ಸೌಲಭ್ಯಗಳು:

ಸರ್ಕಾರದ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳು, ಸಮವಸ್ತ್ರ ಮತ್ತು ಸಾಕ್ಸ್, ಪ್ರತಿದಿನ ಪೌಷ್ಟಿಕ ಮಧ್ಯಾಹ್ನದ ಬಿಸಿಯೂಟ ಹಾಗೂ ಕ್ಷೀರಭಾಗ್ಯ ಯೋಜನೆಯಡಿ ಹಾಲು ವಿತರಣೆ ಮಾಡಲಾಗುತ್ತದೆ. ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗೂ ಸಮಾನ ಅವಕಾಶ ಕಲ್ಪಿಸುವುದು ಶಾಲೆಯ ಮುಖ್ಯ ಗುರಿಯಾಗಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯೋಪಾಧ್ಯಾಯರಾದ ಶ್ರೀ ವಿನಾಯಕ ಅವರು, "ಪ್ರತಿ ಮಗುವಿಗೂ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಮಾಡುವುದು ನಮ್ಮ ಆದ್ಯತೆ. ಪೋಷಕರ



ಸಹಕಾರದೊಂದಿಗೆ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಶಾಲೆ ಬದ್ಧವಾಗಿದೆ. ಶಿಕ್ಷಣದ ಜೊತೆಗೆ ಮೌಲ್ಯಗಳ ಬೋಧನೆಯೂ ನಮ್ಮ ಉದ್ದೇಶ" ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಲೆಯ ನೂತನ ಮುಖ್ಯೋಪಾಧ್ಯಾಯರಾಗಿ ಆಯ್ಕೆಯಾಗಿರುವ ಶ್ರೀ ವಿನಾಯಕ ಅವರನ್ನು ಶಾಲಾ ಎಸ್‌ಡಿಎಂಸಿ ಅಧ್ಯಕ್ಷರಾದ ಶ್ರೀ ಬಸವರಾಜ ಹಡಪದ ಅವರು ಸನ್ಮಾನಿಸಿ ಸ್ವಾಗತಿಸಿದರು.

ಈ ಕಾರ್ಯಕ್ರಮದಲ್ಲಿ ನಗರದ ಯುವಕ ರಮೇಶ್ ಹತ್ತಿಮರದ್, ಎಸ್‌ಡಿಎಂಸಿ ಸದಸ್ಯ ಹಾಗೂ ಗಂಗಾವತಿ ತಾಲ್ಲೂಕು ಗ್ಯಾರಂಟಿ ಸಮಿತಿ ಸದಸ್ಯ ಹಮೀದ್ ಮುಲ್ಲಾ, ಎಸ್‌ಡಿಎಂಸಿ ಉಪಾಧ್ಯಕ್ಷ ಪರಶುರಾಮ ಬಟ್ಟರ್ ಹಾಗೂ ಶಾಲೆಯ ಶಿಕ್ಷಕ ವೃಂದ ಉಪಸ್ಥಿತರಿದ್ದರು.

ಸ್ಥಳೀಯ ಮುಖಂಡರು ಶಾಲೆಯ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

"ಶಿಕ್ಷಣವೇ ಬೆಳಕು, ಶಿಸ್ತಿನಿಂದ ಉನ್ನತ ಸಾಧನೆ, ಪ್ರತಿ ಮಗು ಪ್ರತಿ ದಿನ ಶಾಲೆಗೆ" ಎಂಬ ಧ್ಯೇಯದೊಂದಿಗೆ ಜ್ಞಾನದ ಬೆಳಕಿನಡೆಗೆ ಮಕ್ಕಳ ಮೊದಲ ಹೆಜ್ಜೆಗೆ ಶಾಲೆ ಸಿದ್ಧವಾಗಿದೆ.

ಆಸಕ್ತ ಪೋಷಕರು ಇಂದೇ ತಮ್ಮ ಮಕ್ಕಳನ್ನು ದಾಖಲಿಸಲು ಶಾಲೆಯನ್ನು ಸಂಪರ್ಕಿಸಬಹುದು.

# ಶಾಲಾ ಪ್ರಾರಂಭೋತ್ಸವ : ವಿಕ್ರಮಪೂರ ಸರ್ಕಾರಿ ಶಾಲೆಯಲ್ಲಿ ಮಕ್ಕಳಿಗೆ ಅದ್ದೂರಿ ಸ್ವಾಗತ



**ಬೆಳಗಾವಿ ವಾರ್ತೆ ಅಥಣಿ:** ಕ್ಷೇತ್ರದ ಅಭಿವೃದ್ಧಿಯಲ್ಲಿ ಶಾಸಕ ಲಕ್ಷ್ಮಣ ಸವದಿ ಅವರು ವಿಶೇಷವಾಗಿ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಮಹತ್ವ ನೀಡಿದ್ದು. ಸರಕಾರಿ ಶಾಲೆ ಎಂದರೆ ಆಲಸ್ಯ ಬೇಡ. ಇಂದಿನ ಸಮಾಜದಲ್ಲಿ ಉತ್ತಮ ಸಾಧನೆ ಮಾಡಿರುವ ಬಹತೇಕ ಮಕ್ಕಳು ಕನ್ನಡ ಸರಕಾರಿ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳೇ ಆಗಿದ್ದಾರೆ ಎಂಬುದು ಹೆಮ್ಮೆಯ ವಿಚಾರ ಎಂದು ಪುರಸಭೆ ಅಧ್ಯಕ್ಷೆ ಶಿವಲೀಲಾ ಬುಟಾಳಿ ಹೇಳಿದರು.

ಅವರು ಪಟ್ಟಣದ ವಿಕ್ರಮಪೂರ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಮತ್ತು ಉನ್ನತೀಕರಿಸಿದ ಪ್ರೌಢಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡ 2026–27ನೇ ಸಾಲಿನ ಶಾಲಾ ಪ್ರಾರಂಭೋತ್ಸವ ಮತ್ತು ದಾಖಲಾತಿ ಆಂದೋಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಸರ್ಕಾರಿ ಶಾಲೆಗೆ ನಮ್ಮ ಮಕ್ಕಳನ್ನು ಸೇರಿಸುವುದು ನಮ್ಮ ಜವಾಬ್ದಾರಿಯಾಗಿದೆ. ಸರ್ಕಾರ ಮಕ್ಕಳ ವಿದ್ಯಾಭ್ಯಾಸಕ್ಕೆ ಕೋಟ್ಯಂತರ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ. ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕು. ಎಲ್ಲ ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು ಎಂದು ಕರೆ ನೀಡಿದರು.

ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಎಂ ಆರ್ ಮುಂಜೆ ಮಾತನಾಡಿ ಈ ಶಾಲೆಯಲ್ಲಿ 1ನೇ ತರಗತಿಯಿಂದ 10 ನೇ ತರಗತಿವರೆಗೆ ಇಂಗ್ಲಿಷ್ ಮತ್ತು ಕನ್ನಡ ಭಾಷೆಯಲ್ಲಿ ಬೋಧನೆ ಮಾಡಲಾಗುತ್ತಿದ್ದು. ಸುಸಜ್ಜಿತ ವಿಜ್ಞಾನ ಪ್ರಯೋಗಾಲಯ ಗ್ರಂಥಾಲಯ ಉಚಿತ ಆರೋಗ್ಯ ಸೇವೆ ಉಚಿತ ಪಠ್ಯಪುಸ್ತಕ ಸಮವಸ್ತ್ರ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್ ಡಿಎಂಸಿ) ಅಧ್ಯಕ್ಷ ರಾಕೇಶ ಮೈಗೂರ ಮಾತನಾಡಿ ನಮ್ಮದು ಸರ್ಕಾರಿ ಶಾಲೆ ಆದರೂ ಖಾಸಗಿ ಶಾಲೆಗಳಿಂದ ಹೆಚ್ಚಿನ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು ಪ್ರತಿ ತಿಂಗಳು ಪಾಲಕ ಹಾಗೂ ಶಿಕ್ಷಕರ ಸಭೆ ಮಕ್ಕಳ ಕಲಿಕಾ ಪ್ರಗತಿಯ ನಿರಂತರ ಮೌಲ್ಯಮಾಪನ ಎಸ್ ಡಿ ಎಂ ಸಿ ಸಭೆ ಆಯೋಜಿಸಲಾಗುತ್ತಿದ್ದು ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಪ್ರಾಜೆಕ್ಟ್ ಆಧಾರಿತ ಕಲಿಕೆ ಹಾಗೂ ಸಾಂಸ್ಕೃತಿಕ ಕ್ರೀಡಾ ಚಟುವಟಿಕೆಗಳಿಗೆ ವಿಶೇಷ ಒತ್ತು ನೀಡಲಾಗುವುದು ಹಾಗೂ ಖಾಸಗಿ ಶಾಲೆಗಿಂತ ಯಾವುದರಲ್ಲೂ ಕಡಿಮೆ ಇಲ್ಲದ ಸೌಲಭ್ಯಗಳು ಇಲ್ಲಿವೆ ಎಂದು ಹೇಳಿದರು.

ಪುರಸಭೆ ಉಪಾಧ್ಯಕ್ಷ ಭುವನೇಶ್ವರಿ ಯಕ್ಕಂಚಿ ಮಾತನಾಡಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ರಾಜಶೇಖರ ಗುಡೊಡಗಿ, ರಿಯಾಜ್ ಸನದಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಶಿವಾನಂದ ಕಲ್ಲಾಪೂರ, ಕ್ಷೇತ್ರ ಸಮನ್ವಯಾಧಿಕಾರಿ ಗೌಡಪ್ಪ ಖೋತ, ಮಧ್ಯಾಹ್ನ ಬಿಸಿಊಟ ಯೋಜನೆಯ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ನಾಮಧಾರ, ಶಾಲೆಯ ಮುಖ್ಯೋಪಾಧ್ಯಾಯ ಡಿ ಸ್ ಬಸರಗಿ, ಶಿಕ್ಷಕರಾದ ಡಿ ಎಸ್ ಗುಡದಿನ್ನಿ, ವಿ ಎಸ್ ವಾಘಮೊಡೆ, ಡಿ ಎ ಬರಡಗಿ, ಎಸ್ ಎಸ್ ಮುಗಳಖೋಡ, ಜಿ ಎನ್ ಕುಂಬಾರ, ಎಫ್ ಎಮ್ ಕೋಬುರ್, ಲಕ್ಷ್ಮಿ ನೀಡೋಣಿ, ಎಸ್ ಡಿ ಎಮ್ ಸಿ ಸದಸ್ಯರಾದ ನಾಗವ್ವ ಸುರವಿ, ಬೀಬಿಆಯಿಶಾ ಮಮದಾಪೂರ, ರೇಣುಕಾ ಬಿರಡಿ, ಸೇರಿದಂತೆ ಪಾಲಕರು ವಿದ್ಯಾರ್ಥಿಗಳು ಭಾಗವಹಿಸಿದರು.

ಬೇಸಿಗೆ ರಜೆಯ ನಂತರ ತಾಲೂಕಿನಾದ್ಯಂತ ಶಾಲೆಗಳು ಅದ್ದೂರಿಯಾಗಿ ಆರಂಭಗೊಂಡಿದ್ದು, ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ತಳಿರು–ತೋರಣಗಳಿಂದ ಅಲಂಕೃತಗೊಂಡ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಆರತಿ ಬೆಳಗಿ, ತಿಲಕವಿಟ್ಟು ಸಿಹಿ ಹಂಚಿ ಶಿಕ್ಷಕರು ಮತ್ತು ಎಸ್‌ಡಿಎಂಸಿ ಸದಸ್ಯರು ಆತ್ಮೀಯವಾಗಿ ಬರಮಾಡಿಕೊಳ್ಳುತ್ತಿದ್ದಾರೆ. ಮೊದಲ ದಿನ ಶಾಲೆಗೆ ಬರುವ ಹೊಸ ಮಕ್ಕಳಿಗೆ ಮತ್ತು ಹಳೆಯ ವಿದ್ಯಾರ್ಥಿಗಳಿಗೆ ಹೂವಿನ ಮಳೆಗರೆದು, ಆರತಿ ಬೆಳಗಿ ಸ್ವಾಗತಿಸಲಾಗುತ್ತದೆ.

**ಪಠ್ಯಪುಸ್ತಕ ವಿತರಣೆ :** ಮಕ್ಕಳಿಗೆ ಮೊದಲ ದಿನವೇ ಉಚಿತ ಸಮವಸ್ತ್ರ, ನೋಟ್‌ಬುಕ್ ಮತ್ತು ಪಠ್ಯಪುಸ್ತಕಗಳನ್ನು ವಿತರಿಸಲಾಗುತ್ತದೆ.

# “ವಿಶ್ವ ತಂಬಾಕು ವಿರೋಧಿ ದಿನ”

**ಬೆಳಗಾವಿ ವಾರ್ತೆ ಉಗರಗೋಳ:** ಮಕ್ಕಳಲ್ಲಿ ಬಾಲ್ಯ ದಲ್ಲಿಯೇ ಪ್ರಾರಂಭವಾಗುವ ಕೆಟ್ಟ ಹವ್ಯಾ ಸಗಳು, ಬೆಳೆಯುತ್ತ, ಬೆಳೆಯುತ್ತ ದುಶ್ಚಟ ಗಳಾಗಿ ಪರಿವರ್ತನೆಗೊಂಡು ಮುಂದೆ ಕುಟುಂಬದ ಅವನತಿಗೆ ಕಾರಣವಾಗಬಹುದು ಎಂದು ಧರ್ಮ ಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಎಚ್ ಆರ ಲವಕುಮಾರ ಹೇಳಿದರು.

ಸವದತ್ತಿ ತಾಲೂಕಿನ ಚಿಕ್ಕುಂಬಿ ಗ್ರಾಮದ ಶ್ರೀ ಬನ್ನಿಮಹಾಂಕಾಳಿ ದೇವಸ್ಥಾನದಲ್ಲಿ ಸೋಮವಾರ ರಂದು ವ್ಯಸನ ಮುಕ್ತಸಮಾಜ ನಿರ್ಮಾಣಕ್ಕಾಗಿ “ವಿಶ್ವ ತಂಬಾಕು ವಿರೋಧಿ ದಿನ” ಕಾರ್ಯಕ್ರಮ ದಲ್ಲಿ ಪಾಲ್ಗೊಂಡು ಮಾತನಾಡಿದ ಅವರು

ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ ಹಾಗೂ ಒಳ್ಳೆಯ ಹವ್ಯಾಸಗಳನ್ನು ಬೆಳೆಸಿ, ಕಲಿಸಿ ಕೊಡುವಲ್ಲಿ ಹೆತ್ತವರ ಪಾತ್ರ ಮುಖ್ಯವಾಗಿರುತ್ತದೆ ಎಂದರು.

ಡಾ, ಗೀತಾ ಸೋಡಿ ಮಾತನಾಡಿ. ತಂಬಾಕು ಸೇವನೆಯಿಂದ ಆರೋಗ್ಯದಲ್ಲಿ ಆಗುವ ದುಷ್ಪರಿಣಾಮಗಳ ಕುರಿತು ಸಮಗ್ರ ಮಾಹಿತಿ ನೀಡಿದ ಅವರು ತಂದೆ, ತಾಯಿಗಳು ಮಕ್ಕಳಿಗಾಗಿ ಮಾಡುವ ತ್ಯಾಗಕ್ಕೆ. ಪ್ರತಿಯಾಗಿ ಮಕ್ಕಳು ಸಹ ದುಶ್ಚಟಗಳ ದಾಸರಾಗದೆ ವಿದ್ಯೆ ಕಲಿತು ಸಮಾಜದ ಕಣ್ಣುಗಳಾಗಬೇಕೆಂದರು.

ತಾಲೂಕಾ ಯೋಜನಾಧಿಕಾರಿ ಸುಭ್ರರಾಯ್ ನಾಯಕ್, ಶಿವಲೀಲಾ ಒಂಟಮೂರಿ, ವನಜಾಕ್ಷಿ ಸಾಲಿಮಠ, ಮಂಜುಳಾ ಹಿರೇಮಠ, ಪವಿತ್ರಾ ಬಡ್ಲಿ, ಮಮತಾಜ್ ಅತ್ತಾರ್, ಶಕುಂತಲಾ ಅಬ್ಬಿಗೇರಿ, ಸಾವಕ್ಕ ಬಾರ್ಕಿ ಹಾಗೂ ಒಕ್ಕೂಟದ ಪದಾಧಿಕಾರಿಗಳು ಮತ್ತು ಸಹಾಯ ಸಂಘದ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.



ಸವದತ್ತಿ ತಾಲೂಕಿನ ಚಿಕ್ಕುಂಬಿ ಗ್ರಾಮದಲ್ಲಿ ವಿಶ್ವ ತಂಬಾಕು ವಿರೋಧಿ ದಿನ ಕಾರ್ಯಕ್ರಮಕ್ಕೆ ದೀಪ ಬೇಳಗಿಸುವ ಮೂಲಕ ಚಾಲನೆ ನೀಡಿದ ಶಿವಲೀಲಾ ಒಂಟಮೂರಿ ಹಾಗೂ ಇತರರಿದ್ದಾರೆ.

# ಬಿ. ಎಂ. ಪಾಟೀಲ ಪಬ್ಲಿಕ್ (ಸಿಬಿಎಸ್‌ಇ) ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ




**ಬೆಳಗಾವಿ ವಾರ್ತೆ ವಿಜಯಪುರ:** ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ಪಬ್ಲಿಕ್(ಸಿಬಿಎಸ್‌ಇ) ಶಾಲೆಯಲ್ಲಿ ಸೋಮವಾರ ಶೈಕ್ಷಣಿಕ ವರ್ಷದ ಪ್ರಾರಂಭೋತ್ಸವ ಅದ್ದೂರಿಯಾಗಿ ನಡೆಯಿತು.ಮಕ್ಕಳು ಶಾಲಾ ವಾಹನದಿಂದ ಕೆಳಗಿಳಿಯುತ್ತಿದ್ದಂತೆಯೇ ಅವರನ್ನು ಬೋಧಕರು ಮತ್ತು ಬೋಧಕರ ಹೊರತಾದ ಸಿಬ್ಬಂದಿ ವೈಭವದಿಂದ ಸ್ವಾಗತಿಸಿ, ಪ್ರತಿ ಮಗುವಿಗೂ ಶುಭಾಶಯ ಪತ್ರವನ್ನು ನೀಡಿ ಕರತಾಡನದ ಮೂಲಕ ಎಲ್ಲರನ್ನು ಬರಮಾಡಿಕೊಂಡರು. ಈ ವೇಳೆ ಎಲ್ಲ ತರಗತಿಗಳನ್ನು ಆಕರ್ಷಕವಾಗಿ ಅಲಂಕಾರ ಮಾಡಲಾಗಿತ್ತು.

ಪ್ರಾರ್ಥನಾ ಸಭೆಯ ವೇದಿಕೆಯಲ್ಲಿ ಸರಸ್ವತಿ ಪೂಜೆ ನೆರವೇರಿಸಿದ ಹಿರಿಯ ಕಾರ್ಯ ಸಂಯೋಜಕಿ ದೀಪಾ ಜಂಬೂರೆ ಮತ್ತು ನೂತನ ಉಪಪ್ರಾಚಾರ್ಯೆ ವಸುಧಾ ನಾರ್ವೇಕರ್ ಅವರು ಮಕ್ಕಳಿಂದ ದೀಪ ಹಚ್ಚಿಸುವ ಮೂಲಕ ಹೊಸ ಶೈಕ್ಷಣಿಕ ವರ್ಷಕ್ಕೆ ಅದ್ದೂರಿಯ ಚಾಲನೆ ನೀಡಿದರು.

ಸಂಗೀತ ಶೀಕ್ಷಕಿ ಸಂತೋಷಿ ಕುಸೂರ ಸರಸ್ವತಿ ಭಜನೆಯನ್ನು ಹಾಡಿದರು. ಸಾಂಸ್ಕೃತಿಕ ಕಾರ್ಯ ಸಂಯೋಜಕಿ ಫರಾ ಜಾಗಿರದಾರ ಸ್ವಾಗತಿಸಿದರು. ಶಾಲೆಗೆ ಹೊಸದಾಗಿ ಆಗಮಿಸಿದ ಪ್ರತಿ ಶಿಕ್ಷಕರನ್ನು ವಿಶೇಷ ರೀತಿಯಲ್ಲಿ ಪರಿಚಯಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಉಪಪ್ರಾಚಾರ್ಯೆ ವಸುಧಾ ನಾರ್ವೇಕರ, ಮುಂದಿನ ಶೈಕ್ಷಣಿಕ ಕಾರ್ಯ ಚಟುವಟಿಕೆಗಳು, ಶಾಲೆಯಲ್ಲಿ ಶಿಸ್ತು ಕಾಯ್ದುಕೊಳ್ಳುವುದರ ಕುರಿತು ಮಾತನಾಡಿದರು.

ಆಂಗ್ಲ ಭಾಷಾ ಮುಖ್ಯಸ್ಥ ವಿಠ್ಠಲ ಬಜೇರಿಯವರ ವಂದಿಸಿದರು.

# ಸಂಭ್ರಮದ ಶಾಲಾ ಪ್ರಾರಂಭೋತ್ಸವ



ಬೆಳಗಾವಿ ವಾರ್ತೆ ಧಾರವಾಡ: ಲಿಂಗಾಯತ ವಿದ್ಯಾಭಿ ವೃದ್ಧಿ ಸಂಸ್ಥೆಯ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಪ್ರಾರಂಭೊ ೀತ್ಸವವನ್ನು ಅತೀ ವಿಜೃಂಭಣೆಯಿಂದ ಪ್ರಾರಂಭಿಸ ಲಾಯಿತು. ಸಂಸ್ಥೆಯ ಮುಖ್ಯ ದ್ವಾರದಿಂದ ಶಾಲೆಯವರೆಗೆ ಮಕ್ಕಳು ಬ್ಯಾಂಡ್ ಬಾರಿಸುತ್ತಾ ಉತ್ತಮ ಕಲಿಕೆ ಉಜ್ವಲ ಭವಿಷ್ಯ ಎಂಬ ಘೋಷ ವಾಕ್ಯವನ್ನು ಕೂಗುತ್ತಾ ಶಾಲೆಯ ಆವರಣವನು ಪ್ರವೇಶಿಸಲಾಯಿತು. ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಚಂದ್ರಕಾಂತ ಮಟ್ಟಿ ಮತ್ತು ಆಡಳಿತ ಮಂಡಳಿಯ ಸದಸ್ಯರಾದ ಎಂ.ಆರ್.ಇಂಡಿ, ಶಾಲೆಯ ಮುಖ್ಯ ಗುರುಗಳಾದ ದೇವೆಂದ್ರಪ್ಪ ಹೊಂಬಳ ಎಲ್ಲ ಮಕ್ಕಳಿಗೆ ಗುಲಾಬಿ ಹೂಗಳೊಂದಿಗೆ ಸಿಹಿ ಮತ್ತು ಹಾಲನ್ನು ನೀಡಿ ಶಾಲೆಗೆ ಬರಮಾಡಿಕೊಂಡರು.

ಶಾಲೆಯ ಎಲ್ಲ ಮಕ್ಕಳಿಗೆ ಪಠ್ಯಪುಸ್ತಕಗಳನ್ನು ವಿತರಿಸಿ ಗೌರವ ಕಾರ್ಯದರ್ಶಿಗಳು ಮಕ್ಕಳು ಅಭ್ಯಾಸದ ಕಡೆಗೆ ಹೆಚ್ಚಿನ ಗಮನ ನೀಡಬೇಕು, ಪಾಲಕರು ಮಕ್ಕಳ ಪ್ರತಿದಿನದ ಶಾಲಾ ಚಟುವಟಿಕೆಯನ್ನು ಪರಿಶೀಲಿಸಿ ಅವರಿಗೆ ಸೂಕ್ತ ಸಲಹೆಗಳನ್ನು ನೀಡಬೇಕೆಂದರು.

ಮುಖ್ಯ ಗುರುಗಳಾದ ದೇವೆಂದ್ರಪ್ಪ ಹೊಂಬಳ ಮಾತನಾಡಿ ಸರಕಾರವು ಪ್ರತಿದಿನ ಮಕ್ಕಳಿಗೆ ನೀಡುತ್ತಿರುವ ಪೌಷ್ಠಿಕ ಆಹಾರದ ಸದುಪಯೋಗ ಪಡೆದುಕೊಳ್ಳಬೇಕೆಂದರು. ವಿದ್ಯಾರ್ಥಿಗಳನ್ನು ಆರೋಗ್ಯವಂತರಾಗಿ ಇಡಲು ಪಠ್ಯದೊಂದಿಗೆ ಆಟಗಳ ಬಗ್ಗೆಯು ತರಬೇತಿ ನೀಡಲಾಗುವುದು ಎಂದು ತಿಳಿಸಿದರು. ಎಸ್.ಎಂ.ಹೂಗಾರ ಕಾರ್ಯಕ್ರಮ ನಿರ್ವಹಿಸಿದರು.

ಈ ಕಾರ್ಯಕ್ರಮದಲ್ಲಿ ಶ್ರೀಮತಿ ಅರ್ಚನಾ ಹಿರೇಮಠ, ಶ್ರೀಮತಿ. ರೇಣುಕಾ ವಾಕೋಡೆ, ಶ್ರೀಮತಿ. ಸಾವಿತ್ರಿ ಪಾಟೀಲ, ಗೌರಮ್ಮ ಅಮರಗೋಳ, ಶ್ರೀಮತಿ. ನಂದಿನಿ ಗಡಾದ, ಶ್ರೀಮತಿ. ಚೈತ್ರಾ ಸಂಗೋಳ್ಳಿ, ಶ್ರೀಮತಿ. ಲತಾ, ಎಂ.ಆರ್.ಪಾಗೋಜಿ, ಸೋಮಶೇಖರ ಕರಡಿಗುಡ್ಡ, ಶ್ರೀಮತಿ. ದಾನೇಶ್ವರಿ ಕಮ್ಮಾರ, ಶ್ರೀಮತಿ. ಮಂಜುಳಾ ಕರೆಣ್ಣವರ, ಶ್ರೀಮತಿ. ರೇಖಾ ಹೊಳಸೆ, ಶ್ರೀಮತಿ. ನಾಗರತ್ನಾ ಕಮ್ಮಾರ ಹಾಗೂ ಪಾಲಕರು ಉಪಸ್ಥಿತರಿದ್ದರು.

# ಶಾಲಾ ಪ್ರಾರಂಭೋತ್ಸವ



ನವಲಗುಂದ: ಪ್ರಸ್ತಕ ಶೈಕ್ಷಣಿಕ ವರ್ಷದ ಅಂಗವಾಗಿ ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ–3 ರಲ್ಲಿ ಶಾಲಾ ಪ್ರಾರಂಭೋತ್ಸವವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು.

ದೀರ್ಘಾವಧಿಯ ಬೇಸಿಗೆ ರಜೆಯ ನಂತರ ಶಾಲೆಗೆ ಮರಳಿದ ವಿದ್ಯಾರ್ಥಿಗಳನ್ನು ಶಾಲೆಯ ಮುಖ್ಯ ದ್ವಾರದಲ್ಲಿ ತಳಿರು–ತೋರಣಗಳಿಂದ ಮತ್ತು ಬಣ್ಣ ಬಣ್ಣದ ಬಲೂನ್‌ಗಳಿಂದ ಶೃಂಗರಿಸಿ ಅದ್ದೂರಿಯಾಗಿ ಸ್ವಾಗತಿಸಲಾಯಿತು, ಶಾಲೆಗೆ ಆಗಮಿಸಿದ ಪುಟ್ಟ ಕಂದಮ್ಮಗಳಿಗೆ ಶಿಕ್ಷಕರು ಹಾಗೂ ಶಾಲಾ ಅಭಿವೃದ್ಧಿ ಸಮಿತಿ ಪದಾಧಿಕಾರಿಗಳು ಪ್ರೀತಿಯಿಂದ ಗುಲಾಬಿ ಹೂವುಗಳನ್ನು ನೀಡಿ ಸ್ವಾಗತಿಸಿದರು.

ಹೊಸ ಶೈಕ್ಷಣಿಕ ವರ್ಷದ ಅಂಗವಾಗಿ ಎಲ್.ಕೆ.ಜಿ, ಯು.ಕೆ.ಜಿ ಹಾಗೂ 1 ರಿಂದ 7ನೇ ತರಗತಿವರೆಗೆ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮಗಳ ಉಚಿತ ದಾಖಲಾತಿ ಪ್ರಕ್ರಿಯೆಗೆ ಅಧಿಕೃತವಾಗಿ ಚಾಲನೆ ನೀಡಲಾಯಿತು, ಮೊದಲ ದಿನವೇ ವಿದ್ಯಾರ್ಥಿಗಳಿಗೆ ಸರ್ಕಾರದ ನಿಯಮಾವಳಿಗಳನ್ವಯ ಉಚಿತ ಪಠ್ಯಪುಸ್ತಕ ವಿತರಿಸಲಾಯಿತು.

ಮುಖ್ಯಅತಿಥಿಗಳಾಗಿ ಕ್ಷೇತ್ರ ಶಿಕ್ಷಣಾದಿಕಾರಿಗಳ ಕಾರ್ಯಾಲಯದ ಪ್ರಾಥಮಿಕ ಶಿಕ್ಷಣ ಸಂಯೋಜಕರಾದ ಎಸ್.ಎಂ ಬೆಂಚಿಕೇರಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಕಾಶೀಮಸಾಬ ಮಚಲಿಬಂದರ, ಪ್ರಧಾನ ಗುರುಮಾತೆ ಎಂ.ಸಿ ಚನ್ನಪ್ಪಗೌಡ್ರ, ಮಾಬುಸಾಬ ಯರಗುಪ್ಪಿ, ಬಶೀರಅಹ್ಮದ ಹುನಗುಂದ, ಅಡಿವೆಪ್ಪ ಶಿರಸಂಗಿ, ಮಲ್ಲಿಕಾರ್ಜುನಸ್ವಾಮಿ ಮಠಪತಿ, ಬಸವರಾಜ ಮಲ್ಲದಾಸರ, ಸಹ ಶಿಕ್ಷಕರಾದ ಎಂ.ಎಚ್ ಚಿಕನಾಳ, ಆರ್.ಬಿ ಹಳ್ಳಿಕೇರಿ, ಸುರೇಶ ಭಜಂತ್ರಿ, ಕೆ. ಎಫ್ ಬಂತಿ, ಕುಮಾರಿ ಎಂ.ಎನ್ ವಗ್ಗರ, ಮಂಜುನಾಥ ತೇಲಿ, ಬಸವರಾಜ ಮಡಿವಾಳರ, ಶಿವಾನಂದ ಜಾಲಗಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಹಿಜಾಬ್ ವಿರೋಧಿಸಿ ಹುಬ್ಬಳ್ಳಿಯಲ್ಲಿ ಪ್ರತಿಭಟನೆ



ಹುಬ್ಬಳ್ಳಿ: ರಾಜ್ಯದ ಶೈಕ್ಷಣಿಕ ವಲಯದಲ್ಲಿ ಕೆಲವು ಸಮಯದಿಂದ ತಣ್ಣಗಾಗಿದ್ದ ಧಾರ್ಮಿಕ ಉಡುಪುಗಳ ಸಂಘರ್ಷದ ಕಿಡಿ ವಾಣಿಜ್ಯ ನಗರಿ ಹುಬ್ಬಳ್ಳಿಯಲ್ಲಿ ಮತ್ತೊಮ್ಮೆ ಜಾಗೃತಗೊಂಡಿದೆ.

ಶಾಲಾ ಮತ್ತು ಕಾಲೇಜುಗಳ ಆವರಣದಲ್ಲಿ ಹಿಜಾಬ್ ಧರಿಸುವುದಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಆಡಳಿತಾರೂಢ ಸರ್ಕಾರವು ಕೆಲವು ಸಡಿಲಿಕೆಗಳನ್ನು ಅಥವಾ ಮುಕ್ತ ಅವಕಾಶವನ್ನು ಕಲ್ಪಿಸಿದೆ ಎನ್ನುವ ವಿಚಾರ ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿತ್ತು. ಈ ನಿರ್ಧಾರವನ್ನು ತೀವ್ರವಾಗಿ ವಿರೋಧಿಸಿ ಶ್ರೀರಾಮಸೇನಾ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯು ಹುಬ್ಬಳ್ಳಿ ನಗರದಲ್ಲಿ ತೀವ್ರ ಸ್ವರೂಪದ ಹಾಗೂ ವಿನೂತನ ಮಾದರಿಯ ಪ್ರತಿಭಟನೆಯನ್ನು ಹಮ್ಮಿಕೊಳ್ಳುವ ಮೂಲಕ ಶೈಕ್ಷಣಿಕ ವಲಯದಲ್ಲಿ ಹೊಸದೊಂದು ಸಂಚಲನವನ್ನು ಮೂಡಿಸಿದೆ.

ಸಂಘಟನೆಯ ಪ್ರಮುಖ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಒಟ್ಟಾಗಿ ಹುಬ್ಬಳ್ಳಿ ನಗರದ ಪ್ರಮುಖ ಶಾಲಾ ಮತ್ತು ಕಾಲೇಜುಗಳ ಮುಂಭಾಗದಲ್ಲಿ ಜಮಾಯಿಸಿ ಸರ್ಕಾರದ ಹೊಸ ಧೋರಣೆಯ ವಿರುದ್ಧ ತೀವ್ರ ಅಸಮಾಧಾನವನ್ನು ವ್ಯಕ್ತಪಡಿಸಿದರು. ಕೇವಲ ಘೋಷಣೆಗಳನ್ನು ಕೂಗುವುದಕ್ಕೆ ಸೀಮಿತವಾಗದ ಪ್ರತಿಭಟನಾಕಾರರು ಶೈಕ್ಷಣಿಕ ಸಂಸ್ಥೆಗಳಿಗೆ ಆಗಮಿಸುತ್ತಿದ್ದ ಹಿಂದೂ ವಿದ್ಯಾರ್ಥಿಗಳಿಗೆ ಸಾಲು ಸಾಲಾಗಿ ಕೇಸರಿ ಶಾಲುಗಳನ್ನು ವಿತರಣೆ ಮಾಡಿದರು. ವಿದ್ಯಾರ್ಥಿಗಳು ಈ ಕೇಸರಿ ಶಾಲುಗಳನ್ನು ಧರಿಸಿ ತರಗತಿಗಳಿಗೆ ಪ್ರವೇಶಿಸುವಂತೆ ಪ್ರೇರೇಪಿಸುವ ಮೂಲಕ ಸಂಘಟನೆಯು ತನ್ನ ಸಾಂಸ್ಕೃತಿಕ ಹಾಗೂ ಧಾರ್ಮಿಕ ಪ್ರತಿರೋಧವನ್ನು ಅತ್ಯಂತ ಸ್ಪಷ್ಟವಾಗಿ ದಾಖಲಿಸಿದೆ.

ಈ ಮಹತ್ವದ ಬೆಳವಣಿಗೆಯಿಂದಾಗಿ ಹುಬ್ಬಳ್ಳಿಯ ಶೈಕ್ಷಣಿಕ ಸಂಸ್ಥೆಗಳ ಸುತ್ತಮುತ್ತಲಿನ ವಾತಾವರಣದಲ್ಲಿ ಹಠಾತ್ ಬಿಗುವಿನ ಪರಿಸ್ಥಿತಿ ನಿರ್ಮಾಣವಾಯಿತು. ಪ್ರತಿಭಟನಾಕಾರರ ಪ್ರಮುಖ ವಾದದ ಪ್ರಕಾರ ವಿದ್ಯಾಸಂಸ್ಥೆಗಳು ಜ್ಞಾನಾರ್ಜನೆಯ ಪವಿತ್ರ ಕೇಂದ್ರಗಳಾಗಿದ್ದು ಅಲ್ಲಿ ಕೇವಲ ಸಮಾನತೆಯನ್ನು ಬಿಂಬಿಸುವ ಶಾಲಾ ಸಮವಸ್ತ್ರ ನಿಯಮಾವಳಿಗಳನ್ನು ಮಾತ್ರ ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಯಾವುದೇ ಒಂದು ನಿರ್ದಿಷ್ಟ ಸಮುದಾಯದ ಧಾರ್ಮಿಕ ಆಚರಣೆಗಳಿಗೆ ಅಥವಾ ಸಾಂಪ್ರದಾಯಿಕ ಉಡುಪುಗಳಿಗೆ ಶಾಲಾ ಆವರಣದ ಒಳಗೆ ಯಾವುದೇ ಕಾರಣಕ್ಕೂ ಆಡಳಿತ ಮಂಡಳಿಗಳು ಅಥವಾ ಸರ್ಕಾರವು ವ್ಯವಸ್ಥಿತವಾಗಿ ಅವಕಾಶ ನೀಡಬಾರದು ಎನ್ನುವುದು ಪ್ರತಿಭಟನೆಯ ಮುಖ್ಯ ಉದ್ದೇಶವಾಗಿದೆ.

ಶ್ರೀರಾಮಸೇನಾ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ಪ್ರಮುಖ ಮುಖಂಡರು ಸ್ಥಳೀಯ ಮಾಧ್ಯಮಗಳೊಂದಿಗೆ ಮಾತನಾಡುವ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಪ್ರಸ್ತುತ ನೀತಿಗಳನ್ನು ಕಟುವಾಗಿ ಟೀಕಿಸಿದರು. ಪ್ರಸ್ತುತ ಸರ್ಕಾರವು ಸಮಾಜದಲ್ಲಿ ಸಮಾನತೆಯನ್ನು ಕಾಪಾಡುವಲ್ಲಿ ಸಂಪೂರ್ಣವಾಗಿ ವಿಫಲವಾಗಿದ್ದು ಒಂದು ಕಣ್ಣಿಗೆ ಬೆಣ್ಣೆ ಮತ್ತು ಮತ್ತೊಂದು ಕಣ್ಣಿಗೆ ಸುಣ್ಣ ಸವರುವಂತಹ ತಾರತಮ್ಯದ ಧೋರಣೆಯನ್ನು ಅಳವಡಿಸಿಕೊಂಡಿದೆ ಎಂದು ಅವರು ಗಂಭೀರ ಆರೋಪ ಮಾಡಿದರು. ಬಹುಸಂಖ್ಯಾತ ವಿದ್ಯಾರ್ಥಿಗಳ ಭಾವನೆಗಳನ್ನು ಕಡೆಗಣಿಸಿ ಕೇವಲ ಮತ ಬ್ಯಾಂಕ್ ರಾಜಕಾರಣಕ್ಕಾಗಿ ಶೈಕ್ಷಣಿಕ ನಿಯಮಗಳನ್ನು ಗಾಳಿಗೆ ತೂರಲಾಗುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಹಿಜಾಬ್ ಧರಿಸಲು ಪರೋಕ್ಷವಾಗಿ ಅಥವಾ ಪ್ರತ್ಯಕ್ಷವಾಗಿ ನೀಡಿರುವ ಎಲ್ಲಾ ರೀತಿಯ ಸಡಿಲಿಕೆಗಳನ್ನು ಹಾಗೂ ವಿಶೇಷ ಅನುಮತಿಗಳನ್ನು ರಾಜ್ಯ ಸರ್ಕಾರವು ತಕ್ಷಣವೇ ಜಾರಿಗೆ ಬರುವಂತೆ ಹಿಂಪಡೆಯಬೇಕು ಎಂದು ಸಂಘಟನೆಯು ಈ ಸಂದರ್ಭದಲ್ಲಿ ಬಲವಾಗಿ ಆಗ್ರಹಿಸಿತು.

ಒಂದು ವೇಳೆ ಸರ್ಕಾರವು ಸಾರ್ವಜನಿಕರ ಹಾಗೂ ಹಿಂದೂ ಸಂಘಟನೆಗಳ ಈ ನ್ಯಾಯಯುತ ಬೇಡಿಕೆಯನ್ನು ನಿರ್ಲಕ್ಷಿಸಿದರೆ ಅಥವಾ ತನ್ನ ಪೂರ್ವಾಗ್ರಹ ಪೀಡಿತ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಮುಂಬರುವ ದಿನಗಳಲ್ಲಿ ಇಡೀ ರಾಜ್ಯಾದ್ಯಂತ ಅತ್ಯಂತ ಉಗ್ರ ಸ್ವರೂಪದ ಹೋರಾಟ ನಡೆಸುವುದಾಗಿ ಸಂಘಟನೆ ಎಚ್ಚರಿಕೆ ನೀಡಿದೆ.

# ಡಿಪ್ಲೋಮಾ ಪ್ರವೇಶದ ಅವಧಿ ವಿಸ್ತರಣೆ

ಗದಗ : 2026–27ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪೂರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಉಳಿದಿರುವ ಡಿಪ್ಲೋಮಾ ಕೋರ್ಸು ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ ಆಫ್–ಲೈನ್ ಮೂಲಕ ಮೆರಿಟ್ ಹಾಗೂ ರೋಷ್ಟರ್ ಆಧಾರದ ಮೇರೆಗೆ ಡಿಪ್ಲೋಮಾ ಪ್ರವೇಶ ಪಡೆಯಲು ಜೂನ 30 ವರೆಗೆ ಅವಧಿಯನ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾಲೇಜಿನ ಕಛೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001